

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 Issue: 266 ₹ ಬೆಲೆ: 4 Saturday, 16, December,2023 newsbelagavi@gmail.com 9900332089 Regn,No:G-2/PMG/KA/NK/BM/139/2021-23


## ಕೊನೆಯ ದಿನ: ಪರಿಷತ್‌ನಲ್ಲಿ 3 ವಿಧೇಯಕಗಳಿಗೆ ಅಂಗೀಕಾರ

ಬೆಳಗಾವಿ, ಸುವರ್ಣ ಸೌಧ: ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ಎರಡನೆ ತಿದ್ದುಪಡಿ) ವಿಧೇಯಕ 2023 ಸೇರಿದಂತೆ ವಿವಿಧ 3 ವಿಧೇಯಕಗಳು ಡಿಸೆಂಬರ್ 15ರಂದು ವಿಧಾನ ಪರಿಷತ್‌ನಲ್ಲಿ ಅಂಗೀಕಾರಗೊಂಡವು.

ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ಎರಡನೆ ತಿದ್ದುಪಡಿ) ವಿಧೇಯಕ 2023ನ್ನು ಮುಖ್ಯಮಂತ್ರಿ ಅವರ ಪರವಾಗಿ ಕಾನೂನು ಸಚಿವರಾದ ಹೆಚ್.ಕೆ..ಪಾಟೀಲ್ ಅವರು ವಿಧಾನ ಪರಿಷತ್ತಿನಲ್ಲಿ ಮಂಡಿಸಿ ಸದನದ ಪರ್ಯಾಲೋಚನೆಗೆ ಸೂಚಿಸಿದರು.

ಸದಸ್ಯರಾದ ಪಿ.ಹೆಚ್.ಪೂಜಾರ, ಕೆ.ಎ.ತಿಪ್ಪೇಸ್ವಾಮಿ, ಕೇಶವ ಪ್ರಸಾದ್, ನಾಗರಾಜ್ ಯಾದವ್, ಪ್ರತಾಪ್ ಸಿಂಹ ನಾಯಕ್, ಉಮಾಶ್ರೀ, ನಜೀರ್, ರವಿಕುಮಾರ್, ಕೆ.ಪಿ.ನಂಜುಂಡಿ, ಅಡಗೂರು ವಿಶ್ವನಾಥ್, ಮರಿತಿಬ್ಬೇಗೌಡ, ಸೀತಾರಾಂ, ಹೇಮಲತಾ ನಾಯಕ್ ಅವರು ವಿಧೇಯಕದ ಕುರಿತು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿ ಬೆಂಬಲ ವ್ಯಕ್ತಪಡಿಸಿದರು. ಬಳಿಕ ವಿಧೇಯಕವು ವಿಧಾನ ಪರಿಷತ್ತಿನ ಸರ್ವಾನುಮತದ ಅಂಗೀಕಾರ ಪಡೆಯಿತು.

ವಿಧಾನಸಭೆಯಿಂದ ಅಂಗಿಕೃತ ರೂಪದಲ್ಲಿರುವ ಕರ್ನಾಟಕ ನ್ಯಾಯವಾದಿಗಳ ಮೇಲಿನ ಹಿಂಸಾಚಾರ ನಿಷೇಧ ವಿಧೇಯಕ 2023 ನ್ನು ಕಾನೂನು, ನ್ಯಾಯ, ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗು ಪ್ರವಾಸೋದ್ಯಮ ಸಚಿವರಾದ ಹೆಚ್.ಕೆ..ಪಾಟೀಲ್ ಅವರು ವಿಧಾನ ಪರಿಷತ್ತಿನಲ್ಲಿ ಮಂಡಿಸಿ ಸದನದ ಪರ್ಯಾಲೋಚನೆಗೆ ಸೂಚಿಸಿದರು. ಸದಸ್ಯರಾದ ಅರುಣ್, ಕೆ.ಎ.ತಿಪ್ಪೇಸ್ವಾಮಿ, ಕೇಶವ ಪ್ರಸಾದ್, ತೇಜಸ್ವಿನಿ ಗೌಡ, ಶಶಿಲ್ ನಮೋಶಿ, ನಿರಾಣಿ ಹನುಮಂತ ರುದ್ರಪ್ಪ, ನಾಗರಾಜ್ ಯಾದವ್, ಕೋಟ ಶ್ರೀನಿವಾಸ ಪೂಜಾರಿ, ಪಿ.ಹೆಚ್. ಪೂಜಾರ್, ಪ್ರತಾಪ್ ಸಿಂಹ ನಾಯಕ್, ಅಡಗೂರು ವಿಶ್ವನಾಥ್, ಬಿ.ಕೆ. ಹರಿಪ್ರಸಾದ್, ಮರಿ ತಿಬ್ಬೇಗೌಡ, ಪ್ರದೀಪ್ ಶೆಟ್ಟರ್, ರವಿಕುಮಾರ್, ಎಸ್.ವಿ.ಸಂಕನೂರ್, ಜಗದೀಶ್ ಶೆಟ್ಟರ್ ವಿಧೇಯಕದ ಕುರಿತು ಮಾತನಾಡಿ ಬೆಂಬಲ ವ್ಯಕ್ತಪಡಿಸಿದರು. ವಿಧೇಯಕವು ವಿಧಾನ ಪರಿಷತ್ತಿನ ಸರ್ವಾನುಮತದ ಅಂಗೀಕಾರ ಪಡೆಯಿತು.

ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ(ತಿದ್ದುಪಡಿ) ವಿಧೇಯಕ 2023 ನ್ನು ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ವಿಧಾನ ಪರಿಷತ್ತಿನಲ್ಲಿ ಮಂಡಿಸಿ ಸದನದ ಪರ್ಯಾಲೋಚನೆಗೆ ಸೂಚಿಸಿದರು. ಸದಸ್ಯರಾದ ಕೆ.ಎ.ತಿಪ್ಪೇಸ್ವಾಮಿ, ತೇಜಸ್ವಿನಿಗೌಡ, ಪಿ.ಹೆಚ್.ಪೂಜಾರ್, ಜಗದೀಶ್ ಶೆಟ್ಟರ್ ವಿಧೇಯಕದ ಕುರಿತು ಮಾತನಾಡಿ ಬೆಂಬಲ ವ್ಯಕ್ತಪಡಿಸಿದರು. ವಿಧೇಯಕವು ವಿಧಾನ ಪರಿಷತ್ತಿನಲ್ಲಿ ಸರ್ವಾನುಮತದ ಅಂಗೀಕಾರ ಪಡೆಯಿತು

## ಉತ್ತರ ಕರ್ನಾಟಕ ಅಭಿವೃದ್ಧಿಯ ಚರ್ಚೆ ಬೆಂಗಳೂರಲ್ಲೂ ನಡೆಯಲಿ



ಬೆಳಗಾವಿ, ಸುವರ್ಣ ಸೌಧ : ಬೆಂಗಳೂರಿನಲ್ಲಿ ನಡೆಯುವ ವಿಧಾನ ಮಂಡಲ ಅಧಿವೇಶನ ಸಂದರ್ಭದಲ್ಲಿ ಸಹ ನಾವು ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳ ಬಗ್ಗೆ ಚರ್ಚಿಸಿ ಸಮಸ್ಯೆಗಳನ್ನು ಪರಿಹರಿಸಬಹುದಾಗಿದೆ ಎಂದು ಕಾನೂನು ಹಾಗೂ ಪ್ರವಾಸೋದ್ಯಮ ಸಚಿವರಾದ ಹೆಚ್.ಕೆ. ಪಾಟೀಲ ಅವರು ಹೇಳಿದರು.

ವಿಧಾನ ಪರಿಷತ್‌ನಲ್ಲಿ ಡಿಸೆಂಬರ್ 15ರಂದು ಉತ್ತರ ಕರ್ನಾಟಕ ಭಾಗದ ಅಭಿವೃದ್ಧಿಯ ವಿಷಯಗಳ ಮೇಲೆ ನಡೆದ ಚರ್ಚೆಯ ವೇಳೆ ಅವರು ಮಾತನಾಡಿ, ಪ್ರತಿ ವರ್ಷ ಬೆಳಗಾವಿಯಲ್ಲಿ ನಡೆಯುವ ಅಧಿವೇಶನ ವೇಳೆಯಲ್ಲಿಯೇ ಉತ್ತರ ಕರ್ನಾಟಕ ಅಭಿವೃದ್ಧಿಯ ವಿಷಯ ಚರ್ಚೆಯಾಗಬೇಕು ಎನ್ನುವ ಮಾನಸಿಕ ಸ್ಥಿತಿಯಿಂದ ನಾವು ಹೊರ ಬರಬೇಕು. ಅಂತಹ ಮಾನಸಿಕ ತೊಡಕುಗಳು ದೂರಾಗಬೇಕು. ಜನರಿಗೆ ತಪ್ಪು ಸಂದೇಶ ಹೋಗಬಾರದು.

# ಡಿಕೆಶಿ ಸಿಬಿಐ ತನಿಖೆ ವಾಪಸ್ ಸದನದಲ್ಲಿ ಗದ್ದಲ



ಬೆಳಗಾವಿ: ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ವಿರುದ್ಧದ ಸಿಬಿಐ ತನಿಖೆಗೆ ನೀಡಿದ್ದ ಅನುಮತಿ ಹಿಂತೆಗೆತ ಪ್ರಕರಣ ವಿಧಾನಸಭೆ ಹಾಗೂ ವಿಧಾನ ಪರಿಷತ್ತಿನಲ್ಲಿ ಪ್ರತಿಧ್ವನಿಸಿ ಆಡಳಿತ ಹಾಗೂ ವಿಪಕ್ಷಗಳ ನಡುವೆ ವಾಕ್ಸಮರ, ಮಾತಿನ ಚಕಮಕಿಗೆ ಕಾರಣವಾಗಿ ಎರಡೂ ಸದನಗಳಲ್ಲಿ ಗದ್ದಲ ಕೋಲಾಹಲದ ವಾತಾವರಣ ಸೃಷ್ಟಿಯಾಯಿತು. ಇಂದು ಸದನ ಆರಂಭವಾಗುತ್ತಿದ್ದಂತೆಯೇ ವಿರೋಧ ಪಕ್ಷದ ನಾಯಕರಾದ ಆರ್. ಅಶೋಕ್ ಅವರು ಡಿಕೆಶಿ ವಿರುದ್ಧ ಸಿಬಿಐ ತನಿಖೆ ಹಿಂಪಡೆದ ಸರ್ಕಾರದ ತೀರ್ಮಾನವನ್ನು ವಿರೋಧಿಸಿ ನಿಲುವಳಿ ಸೂಚನೆ ಮಂಡನೆಗೆ ಮುಂದಾಗಿ ರಾಜ್ಯ ಸಚಿವ ಸಂಪುಟದಲ್ಲಿ ಕೈಗೊಂಡ ನಿರ್ಧಾರ ಸಂವಿಧಾನಬಾಹಿರವಾಗಿದೆ. ರಾಜಕೀಯ ದುರುದ್ದೇಶದಿಂದ ಕೂಡಿದೆ. ಕೂಡಲೇ ಈ ನಿರ್ಧಾರವನ್ನು ವಾಪಸ್ ಪಡೆಯಬೇಕು ಎಂದು ಒತ್ತಾಯಿಸಿದರು. ಮುಖ್ಯಮಂತ್ರಿ ಯಡಿಯೂರಪ್ಪ ನೇತೃತ್ವದ ಸರ್ಕಾರ 2019ರಲ್ಲಿ ಡಿಕೆ. ಶಿವಕುಮಾರ್ ಅವರು ಆದಾಯಕ್ಕಿಂತ ಹೆಚ್ಚು ಆಸ್ತಿ ಪ್ರಕರಣವನ್ನು ಸಿಬಿಐ ತನಿಖೆಗೆ ನೀಡಿದ್ದರು. ಇದನ್ನು ಈಗ ವಾಪಸ್ ಪಡೆಯಲು ಬರಲ್ಲ ಎಂದು ಹೇಳಿ ಈ ಹಿಂದೆ ಕಾಂಗ್ರೆಸ್ ಸರ್ಕಾರ ಯಡಿಯೂರಪ್ಪ ಮತ್ತು ಜನಾರ್ಧನರೆಡ್ಡಿ ಅವರ ವಿರುದ್ಧದ ಪ್ರಕರಣವನ್ನು ಸಿಬಿಐ ತನಿಖೆಗೆ ನೀಡಿತ್ತು. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದಾಗ ಆ ಪ್ರಕರಣವನ್ನು ಹಿಂಪಡೆಯುವ ಕೆಲಸ ಮಾಡಲಿಲ್ಲ. ಕಾಂಗ್ರೆಸ್ ಸರ್ಕಾರ ಈ ರೀತಿ ಮಾಡಿರುವುದು ಸರಿಯಲ್ಲ. ತಮಗೆ ತೇಚಿದಂತೆ ನಿರ್ಣಯಕೈಗೊಳ್ಳುವ ಮೂಲಕ ನ್ಯಾಯಾಂಗದ ಕಣ್ಣಿಗೆ ಮಣ್ಣೆರೆಚುವ ಕೆಲಸ ಮಾಡಲಾಗಿದೆ ಎಂದು ಹರಿಹಾಯ್ದರು. ಈ ಹಂತದಲ್ಲಿ ಆಡಳಿತ ಪಕ್ಷದ ಸದಸ್ಯರು ಪ್ರತಿಪಕ್ಷ ನಾಯಕರ ಮಾತಿಗೆ ಅಡ್ಡಿಪಡಿಸಿ ಮಾತಿನ ಸಮರಕ್ಕೆ ಇಳಿದರು. ವಿಪಕ್ಷಗಳ ಸದಸ್ಯರು ಅಶೋಕ್ ಬೆನ್ನಿಗೆ ನಿಂತು ಆಡಳಿತ ಪಕ್ಷ ಸದಸ್ಯರ ಜತೆ ಮಾತಿನ ಚಕಮಕಿಗೆ ಇಳಿದರು. ಇದರಿಂದ ಸದನದಲ್ಲಿ ಗದ್ದಲದ ವಾತಾವರಣ ರೂಪುಗೊಂಡಿತು. ಈ ಗದ್ದಲದಲ್ಲೇ ಮಾತನಾಡಿದ ಸಭಾಧ್ಯಕ್ಷ ಯುಟಿ ಖಾದರ್ ಈ ಪ್ರಕರಣ ನ್ಯಾಯಾಲಯದಲ್ಲಿದೆ ಹಾಗಾಗಿ ಚರ್ಚೆಗೆ ಅವಕಾಶ ಇಲ್ಲ ಎಂದು ಹೇಳಿ ಈ ಬಗೆಗಿನ ಹೆಚ್ಚಿನ ಚರ್ಚೆಗೆ ಅವಕಾಶ ಕೊಡದೆ ಗದ್ದಲ ವಾಕ್ಸಮರಕ್ಕೆ ಅಂತ್ಯ ಹಾಡಿದರು.

ಆನಂತರ, ಎಚ್.ಕೆ.ಪಾಟೀಲ್, ಬಿಜೆಪಿ ಇದನ್ನು ನಿಲುವಳಿ ಸೂಚನೆಗೆ ಎತ್ತಿಕೊಂಡಿದ್ದೇ ತಪ್ಪು. ಯಾವ ವಿಚಾರ ಕೋರ್ಟ್ ನಲ್ಲಿದೆಯೋ ಅದನ್ನೇ ಚರ್ಚೆಗೆ ತಂದರೆ ಹೇಗೆ ಎಂದು ಪ್ರಶ್ನಿಸಿದರು. ನಿಮ್ಮ ಪಕ್ಷದವರೇ ಕೋರ್ಟ್‌ಗೆ ಹೋಗುತ್ತಾರೆ. ನೈತಿಕವಾಗಿ ತಾಂತ್ರಿಕವಾಗಿ ಕಾನೂನಾತ್ಮಕವಾಗಿ ನಿಲುವಳಿ ನೀಡಿದ್ದು ಸರಿಯಲ್ಲ. ಇದನ್ನು ಕೈಬಿಡಬೇಕು ಎಂದು ಹೇಳಿದರು. ಬಳಿಕ ಹೊರಟ್ಟಿ ಅವರು, ಕೋರ್ಟ್ ನಲ್ಲಿ ಪ್ರಕರಣ ಬಾಕಿ ಇರುವಾಗ ಚರ್ಚೆಗೆ ಅವಕಾಶ ನೀಡುವುದಿಲ್ಲ. ಇದು ನ್ಯಾಯಾಂಗ ನಿಂದನೆ ಆಗುತ್ತದೆ ಎಂದು ರೂಲಿಂಗ್ ನೀಡಿದರು. ಆದರೂ, ಇದನ್ನು ಒಪ್ಪದೇ ಚರ್ಚೆಗೆ ನೀಡುವಂತೆ ಬಿಜೆಪಿ ಸದಸ್ಯರು ಪಟ್ಟುಹಿಡಿದರು. ಸಭಾಪತಿ ರೂಲಿಂಗ್ ಕೊಟ್ಟ ಮೇಲೂ ಮಾತನಾಡುವುದು ಗೌರವ ಅಲ್ಲ ಎಂದು ಕಾಂಗ್ರೆಸ್ ಸದಸ್ಯರು ಎದ್ದುನಿಂತು ವಾಗ್ದಾಳಿ ನಡೆಸಿದರು. ವಿಷಯ ಕೋರ್ಟ್ ನಲ್ಲಿ ಇರುವಾಗ ಕ್ಯಾಬಿನೆಟ್ ಹೇಗೆ ವಾಪಸ್ ಪಡೆಯಿತು ಇದು ನ್ಯಾಯಾಲಯದ ವಿಷಯದಲ್ಲಿ ಸರ್ಕಾರದ ಮಧ್ಯಪ್ರವೇಶ ಅಲ್ವಾ? ಎಂದ ವಿಪಕ್ಷ ಸದಸ್ಯ **ರವಿಕುಮಾರ್ ಖಾರವಾಗಿ ಪ್ರಶ್ನಿಸಿದರು.** ಸರ್ಕಾರ ಅಡ್ಡ ದಾರಿಯನ್ನು ಹಿಡಿದು ಸಿಬಿಐ ಕೇಸ್ ವಾಪಸ್ ಪಡೆದಿದೆ ಎಂದು ಬಿಜೆಪಿ ಸದಸ್ಯರ ಆಕ್ರೋಶ ವ್ಯಕ್ತಪಡಿಸಿದಾಗ, ರಾಜಕೀಯ ದುರುದ್ದೇಶದಿಂದ ಸಿಬಿಐಗೆ ಕೊಟ್ಟಿದ್ದು ನೀವು ಎಂದು ಸಚಿವ ಪ್ರಿಯಾಂಕ ಖರ್ಗೆ ತಿರುಗೇಟು ನೀಡಿದರು.

ಈ ಹಂತದಲ್ಲಿ ಮಧ್ಯ ಪ್ರವೇಶಿಸಿದ ಸಭಾಪತಿ ಹೊರಟ್ಟಿ, ಈ ವಿಷಯದ ಮೇಲೆ ಮತ್ತೆ ಮಾತಾಡಬೇಡಿ, ಹುಡುಗಾಟ ಮಾಡಬೇಡಿ ಎಂದು ಏರಿದ ಧ್ವನಿಯಲ್ಲಿ ಹೇಳಿ ಚರ್ಚೆಗೆ ತೆರೆ ಎಳೆದರು.

## ವಿಧಾನ ಪರಿಷತ್‌ನಲ್ಲೂ ಪ್ರಸ್ತಾಪ ಗದ್ದಲ

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಮೇಲೆ ಆದಾಯಕ್ಕಿಂತ ಅಧಿಕ ಸಂಪಾದನೆ ಆರೋಪ ಪ್ರಕರಣ ಸಂಬಂಧ ಸಿಬಿಐ ತನಿಖೆ ಹೊತ್ತಿನಲ್ಲಿಯೇ ರಾಜ್ಯ ಸರ್ಕಾರ ಈ ಗಂಭೀರ ಸ್ವರೂಪ ಪ್ರಕರಣವನ್ನು ಹಿಂಪಡೆದಿದೆ ಎನ್ನುವ ವಿಚಾರಕ್ಕೆ ಮೇಲ್ಮನೆಯಲ್ಲಿ ಆಡಳಿತರೂಢ ಹಾಗೂ ವಿಪಕ್ಷ ನಡುವೆ ಸದ್ದು ಗದ್ದಲ ನಡೆಯಿತು. ವಿಧಾನ ಪರಿಷತ್ತಿನ ಕಲಾಪದಲ್ಲಿಂದು ಆರಂಭದಲ್ಲಿ ನಿಯಮ 59ರ ಅಡಿಯ ಬಿಜೆಪಿ ಸದಸ್ಯ ಕೋಟಾ ಶ್ರೀನಿವಾಸ ಪೂಜಾರಿ ಈ ವಿಷಯ ಪ್ರಸ್ತಾಪಿಸಿ, ಉಪ ಮುಖ್ಯಮಂತ್ರಿ ಸ್ಥಾನದಲ್ಲಿ ಇರುವ ಡಿಕೆ ಶಿವಕುಮಾರ್ ಅವರ ಸಿಬಿಐ ಪ್ರಕರಣ ವಾಪಸ್ ಪಡೆದಿರುವುದು ಪ್ರಜಾಪ್ರಭುತ್ವಕ್ಕೆ ಮಾಡಿದ ಅಪಮಾನ. ಯಾವ ಒತ್ತಡಕ್ಕೆ ಸಿಲುಕಿ ಕಾನೂನಿನ ಬಗ್ಗೆ ಪರಿಜ್ಞಾನ ಇಲ್ಲದೇ ಮಾಡಿದ್ದಾರೆ. ಇವರೊಬ್ಬ ಸಾಮಾನ್ಯ ವ್ಯಕ್ತಿ ಅಲ್ಲ. ಈ ಸಂಬಂಧ ಚರ್ಚೆ ಮಾಡುವುದಕ್ಕೆ ಅವಕಾಶ ನೀಡಬೇಕಾಗಿ ಕೋರಿದರು.


## ಉ.ಕ ಸಚಿಮಗ ಅಭಿವೃದ್ಧಿಗೆ ಬದ್ಧ



ಬೆಳಗಾವಿ, ಸುವರ್ಣ ಸೌಧ: ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ರಾಜ್ಯ ಸರ್ಕಾರವು ಬದ್ಧವಾಗಿದೆ ಎಂದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ವಿಧಾನ ಪರಿಷತ್‌ನಲ್ಲಿ ಹೇಳಿದರು. ವಿಧಾನ ಪರಿಷತ್‌ನಲ್ಲಿ ಡಿಸೆಂಬರ್ 15ರಂದು ನಡೆದ ಕೊನೆಯ ದಿನದ ಕಲಾಪದಲ್ಲಿ ಉತ್ತರ ಕರ್ನಾಟಕ ಅಭಿವೃದ್ಧಿ ಚರ್ಚೆಯ ಮೇಲೆ ಮಾತನಾಡಿದ ಅವರು, ಉತ್ತರ ಕರ್ನಾಟಕದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸುವ ಸಂಬಂಧ ಮತ್ತು ಸ್ಥಳೀಯರಿಗೆ ಉದ್ಯೋಗ ಒದಗಿಸುವ ಸಲುವಾಗಿ ಬೆಳಗಾವಿ ಸಮೀಪ ಸುಮಾರು 2,000 ಎಕರೆ ಪ್ರದೇಶದಲ್ಲಿ ಹೊಸ ಕೈಗಾರಿಕಾ ಪ್ರದೇಶ, 500 ಎಕರೆ ಪ್ರದೇಶದಲ್ಲಿ ಫೌಂಡ್ರಿ ಕ್ಲಸ್ಟರ್ ಅನ್ನು ಸ್ಥಾಪಿಸಲಾಗುವುದು ಹಾಗೂ ಜಿಲ್ಲೆಯಲ್ಲಿ ಏರೋಸ್ಪೇಸ್ ಆಧಾರಿತ ಕೈಗಾರಿಕೆಗಳ ಬೆಳವಣಿಗೆಗೆ ವಿಶೇಷ ಒತ್ತು ನೀಡಲಾಗುವುದು ಎಂದು ತಿಳಿಸಿದರು. ಧಾರವಾಡ ಜಿಲ್ಲೆಯಲ್ಲಿ ಕೈಗಾರಿಕಾ ಕ್ಲಸ್ಟರ್ ಜತೆಗೆ ಧಾರವಾಡದ ಸಮೀಪ ಸುಮಾರು 3000 ಎಕರೆ ಪ್ರದೇಶದಲ್ಲಿ ಹೊಸ ಕೈಗಾರಿಕಾ ಪ್ರದೇಶ ಸ್ಥಾಪಿಸಲಾಗುವುದು. ಹತ್ತಿ ಉತ್ಪಾದನೆಯನ್ನು ಪ್ರೋತ್ಸಾಹಿಸಲು ರಾಯಚೂರಿನಲ್ಲಿ ಹತ್ತಿ ಆಧಾರಿತ ಕೈಗಾರಿಕೆಗಳ ಸ್ಥಾಪನೆಗೆ ವಿಶೇಷ ಒತ್ತು ನೀಡಲಾಗುವುದು ಎಂದು ತಿಳಿಸಿದರು. ಸಮೃದ್ಧ ಪ್ರವಾಸೋದ್ಯಮಗಳ ತಾಣವಾದ ಉತ್ತರ ಕರ್ನಾಟಕದಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿ ಮಾಡಲು ಸಮಗ್ರ ಕ್ರಿಯಾಯೋಜನೆ ರೂಪಿಸಿ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ಕ್ರಮವಹಿಸಲಾಗುವುದು. ವಿಜಯಪುರದಲ್ಲಿ ಉತ್ಪಾದನಾ ಕ್ಲಸ್ಟರ್ ಅನ್ನು ಅಂದಾಜು 1500 ಎಕರೆ ಪ್ರದೇಶದಲ್ಲಿ ಸ್ಥಾಪಿಸಲಾಗುವುದು. ಧಾರವಾಡದಲ್ಲಿರುವ ವಾಲ್ಮಿ ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆಯನ್ನು ಉನ್ನತೀಕರಿಸಲಾಗುವುದು. ಬಳ್ಳಾರಿ ಮತ್ತು ರಾಯಚೂರು ವಿಮಾನ ನಿಲ್ದಾಣಗಳನ್ನು ಅಭಿವೃದ್ಧಿಗೊಳಿಸಲು ಕ್ರಮವಹಿಸಲಾಗುವುದೆಂದು ಅವರು ಹೇಳಿದರು. ನಂಜುಂಡಪ್ಪ ವರದಿ ಸಲ್ಲಿಕೆಯಾಗಿ 21 ವರ್ಷಗಳಾಗಿವೆ. ಬಯಲು ಸೀಮೆ ಅಭಿವೃದ್ಧಿ ಮಂಡಳಿಯಿಂದಲೂ ಅನುದಾನಗಳನ್ನು ಒದಗಿಸಲಾಗಿದೆ. ಆದಾಗ್ಯೂ ನಿರೀಕ್ಷಿತ ಮಟ್ಟದಲ್ಲಿ ಈ ಭಾಗವು ಅಭಿವೃದ್ಧಿಯಾಗುತ್ತಿಲ್ಲ. ಶಿಕ್ಷಣ, ಆರೋಗ್ಯ, ಆರ್ಥಿಕ ಬೆಳವಣಿಗೆ ಸಾಧಿಸುವಲ್ಲಿ ಈ ಭಾಗದ ಜಿಲ್ಲೆಗಳು ಹಿಂದೆ ಬಿದ್ದಿವೆ. ಹಾಗಾಗಿ ವಿಶೇಷವಾಗಿ ನಂಜುಂಡಪ್ಪನವರ ವರದಿಯ ಅನುಷ್ಠಾನ ಹಾಗೂ ಅದರ ಫಲಶ್ರುತಿಯನ್ನು ಅಧ್ಯಯನ ಮಾಡಲು ಖ್ಯಾತ ಅರ್ಥಶಾಸ್ತ್ರಜ್ಞರೊಬ್ಬರ ಅಧ್ಯಕ್ಷತೆಯಲ್ಲಿ ಹೈಪವರ್ [ಉನ್ನತಾಧಿಕಾರ ಸಮಿತಿ] ಕಮಿಟಿಯನ್ನು ರಚಿಸಲಾಗುವುದು ಎಂದು ಘೋಷಿಸಿದರು. ರಾಜ್ಯದಲ್ಲಿ ಎದುರಾಗಿರುವ ಬರಗಾಲದ ಹಿನ್ನೆಲೆ ಸಹಕಾರ ಬ್ಯಾಂಕುಗಳಲ್ಲಿರುವ ರೈತರು ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲದ ಅಸಲನ್ನು ಕಟ್ಟಿದರೆ ಸಂಪೂರ್ಣ ಬಡ್ಡಿಯನ್ನು ಮನ್ನಾ ಮಾಡಲು ನಮ್ಮ ಸರ್ಕಾರ ತೀರ್ಮಾನಿಸಿದೆ. ಕಲ್ಯಾಣ ಕರ್ನಾಟಕ ಪ್ರದೇಶ ವ್ಯಾಪ್ತಿಯ ಜಿಲ್ಲೆಗಳಲ್ಲಿ ಖಾಲಿಯಿರುವ ಎಲ್ಲಾ ಹುದ್ದೆಗಳನ್ನು ತುಂಬಲಾಗುವುದು.

## ಬೆಳಗಾವಿ ಮಹಿಳೆ ವಿವಸ್ತ್ರಗೊಳಿಸಿ, ಹಲ್ಲೆ ಪ್ರಕರಣ

### ಇಂದು ಬಿಜೆಪಿಯಿಂದ ರಾಜ್ಯದಾದ್ಯಂತ ಪ್ರತಿಭಟನೆ; ಬಿವೈ ವಿಜಯೇಂದ್ರ



ಬೆಳಗಾವಿ: ಬೆಳಗಾವಿಯಲ್ಲಿ ಮಹಿಳೆಯೊಬ್ಬರ ಮೇಲೆ ಹಲ್ಲೆ ನಡೆಸಿ, ವಿವಸ್ತ್ರಗೊಳಿಸಿ ಮೆರವಣಿಗೆ ನಡೆಸಿದ ಘಟನೆಯನ್ನು ಖಂಡಿಸಿ ಬಿಜೆಪಿ ಇಂದು (ಡಿ.16) ರಾಜ್ಯದಾದ್ಯಂತ ಪ್ರತಿಭಟನೆ ನಡೆಸಲಿದೆ ಎಂದು ಪಕ್ಷದ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಶುಕ್ರವಾರ ತಿಳಿಸಿದ್ದಾರೆ. ಘಟನೆ ಸಂಬಂಧ ಎಂಟು ಜನರನ್ನು ಬಂಧಿಸಲಾಗಿದ್ದು, ಇತರ ಆರೋಪಿಗಳಿಗಾಗಿ ಹುಡುಕಾಟ ನಡೆಯುತ್ತಿದೆ. ಈ ಸಂಬಂಧ ಕರ್ನಾಟಕ ಹೈಕೋರ್ಟ್ ಕಳವಳ ವ್ಯಕ್ತಪಡಿಸಿದ್ದು, ಸ್ವಯಂಪ್ರೇರಿತ ಪ್ರಕರಣವನ್ನು ದಾಖಲಿಸಿಕೊಂಡಿದೆ. ಡಿಸೆಂಬರ್ 11 ರಂದು ಬೆಳಗಾವಿಯ ವಂಟಮುರಿ ಗ್ರಾಮದಲ್ಲಿ ಸಂತ್ರಸ್ತೆಯ ಪುತ್ರ ತಮ್ಮದೇ ಸಮುದಾಯದ ಯುವತಿಯೊಂದಿಗೆ ಪರಾರಿಯಾದ ನಂತರ ಮಹಿಳೆಯನ್ನು ವಿವಸ್ತ್ರಗೊಳಿಸಿ, ಕಂಬಕ್ಕೆ ಕಟ್ಟಿ ಹಲ್ಲೆ ನಡೆಸಲಾಗಿತ್ತು. ಸುದ್ದಿಗಾರರೊಂದಿಗೆ ಮಾತನಾಡಿದ ವಿಜಯೇಂದ್ರ, ಪ್ರಕರಣದ ಎಂಟು ಆರೋಪಿಗಳು ಇನ್ನೂ ತಲೆಮರೆಸಿಕೊಂಡಿದ್ದು, ಈ ಪ್ರಕರಣವನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಂತ್ರಸ್ತೆಯನ್ನು ಭೇಟಿಯಾಗಿಲ್ಲ ಎಂದು ಆರೋಪಿಸಿದರು. 'ವಿಧಾನಮಂಡಲದ ಅಧಿವೇಶನ ನಡೆಯುತ್ತಿದ್ದು, ಇಡೀ ಸರ್ಕಾರ ಇಲ್ಲಿಯೇ ಮೊಕ್ಕಾಂ ಹೂಡಿರುವ ಬೆಳಗಾವಿಯಲ್ಲಿ ಇಂತಹ ಘಟನೆ ನಡೆದಿರುವುದು ಅಪರಾಧಿಗಳಲ್ಲಿ ಸರ್ಕಾರ ಮತ್ತು ಕಾನೂನು ಜಾರಿ ಸಂಸ್ಥೆಗಳ ಬಗ್ಗೆ ಕಿಂಚಿತ್ತೂ ಗೌರವ ಇಲ್ಲದಿರುವುದನ್ನು ತೋರಿಸುತ್ತದೆ' ಎಂದು ಆರೋಪಿಸಿದ್ದಾರೆ. ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ತುಂಬಾ ಹದಗೆಟ್ಟಿದೆ. ಮಹಾಭಾರತದಲ್ಲಿ ದ್ರೌಪದಿಗೆ ನಡೆದ ಘಟನೆಗಿಂತಲೂ ಘೋರ ಘಟನೆ ಇದಾಗಿದ್ದು, ಶ್ರೀಕೃಷ್ಣ ದ್ರೌಪದಿಯ ರಕ್ಷಣೆಗೆ ಬಂದಿದ್ದು, ಬೆಳಗಾವಿ ಘಟನೆಯಲ್ಲಿ ಯಾರೊಬ್ಬರೂ ಸಂತ್ರಸ್ತೆಗೆ ಸಹಾಯ ಮಾಡಲು ಬರಲಿಲ್ಲ ಎಂದು ಹೈಕೋರ್ಟ್ ಹೇಳಿದೆ ಎಂದರು. ಎಲ್ಲಾ ಜಿಲ್ಲೆ , ತಾಲ್ಲೂಕು ಕೇಂದ್ರಗಳಲ್ಲಿ ರಾಜ್ಯದಾದ್ಯಂತ ಪ್ರತಿಭಟನೆ ಹಮ್ಮಿಕೊಳ್ಳಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಪಾಲ್ಗೊಳ್ಳಲಿದ್ದಾರೆ. ಇಂದು ಮಹಾರಾಷ್ಟ್ರ ದ ಗಡಿಯಲ್ಲಿರುವ ಬೆಳಗಾವಿಯ ಜಿಲ್ಲಾ ಕೇಂದ್ರ ಪಟ್ಟಣದ ಚನ್ನಮ್ಮ ವೃತ್ತದಲ್ಲಿ ಪ್ರತಿಭಟನೆ ನಡೆಸಲು ಪಕ್ಷ ನಿರ್ಧರಿಸಿದೆ ಎಂದು ಅವರು ಹೇಳಿದರು. ಅಪರಾಜಿತಾ ಸಾರಂಗಿ, ಸುನೀತಾ ದುಗ್ಗಲ್, ರಂಜಿತಾ ಕೋಳಿ ಮತ್ತು ಲಾಕೆಟ್ ಚಟರ್ಜಿ ಸೇರಿದಂತೆ ನಾಲ್ವರು ಬಿಜೆಪಿ ಸಂಸದದ ತಂಡ ಶನಿವಾರ ಬೆಳಗಾವಿಗೆ ಭೇಟಿ ನೀಡಲಿದೆ. ಇವರೊಂದಿಗೆ ಪಕ್ಷದ ರಾಷ್ಟ್ರೀಯ ಕಾರ್ಯದರ್ಶಿ ಹಾಗೂ ರಾಂಚಿಯ ಮಾಜಿ ಮೇಯರ್ ಆಶಾ ಲಾಕ್ರಾ ಕೂಡ ಇರುತ್ತಾರೆ ಎಂದು ಹೇಳಿದರು.

## ವಕೀಲರ ಮೇಲಿನ ಹಿಂಸಾಚಾರ ನಿಷೇಧ ಮಸೂದೆ ಅಂಗೀಕಾರ

ಬೆಳಗಾವಿ: ನ್ಯಾಯವಾದಿಗಳು ಯಾವುದೇ ಭಯ ಅಥವಾ ಬಾಹ್ಯ ಪ್ರಭಾವಕ್ಕೆ ಒಳಗಾಗದೆ ತಮ್ಮ ವೃತ್ತಿಪರ ಸೇವೆಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲು ಹಾಗೂ ಅವರ ಮೇಲಿನ ಹಿಂಸೆಯನ್ನು ನಿಷೇಧಿಸಲು ಹಾಗೂ ಅವರಿಗೆ ರಕ್ಷಣೆ ಒದಗಿಸಲು ಅವಕಾಶ ಕಲ್ಪಿಸಿರುವ 2023ನೇ ಸಾಲಿನ ಕರ್ನಾಟಕ ನ್ಯಾಯವಾದಿಗಳ ಮೇಲಿನ ಹಿಂಸಾಚಾರ ನಿಷೇಧ ವಿಧೇಯಕಕ್ಕೆ ವಿಧಾನಸಭೆಯಲ್ಲಿ ಅಂಗೀಕಾರ ದೊರೆತಿದೆ.

ವಿಪಕ್ಷ ನಾಯಕ ಆರ್.ಅಶೋಕ್ ಮಾತನಾಡಿ, ಕಳೆದ ವರ್ಷ ಬೆಳಗಾವಿಯಲ್ಲಿ ಅಧಿವೇಶನ ನಡೆದಾಗ ವಕೀಲರು ಪ್ರತಿಭಟನೆ ನಡೆಸಿದಾಗ ಪೊಲೀಸರ ನಡುವೆ ವಾಗ್ವಾದ ನಡೆದಿತ್ತು. ಆಗ ನಾನೇ ಹೋಗಿ ವಕೀಲರಿಂದ ಮನವಿ ಪಡೆದಿದ್ದೆ. ವಕೀಲರ ಮೇಲೆ ಹಲ್ಲೆಯಾದಾಗ, ಅವರಿಂದ ಬೇರೆಯವರ ಮೇಲೆ ಹಲ್ಲೆಯಾದಾಗ ಏನು ಮಾಡಬೇಕು? ಈ ಬಗ್ಗೆ ಕಾನೂನು ತೊಡಕಾಗದಂತೆ ಬಹಳ ಎಚ್ಚರ ವಹಿಸಬೇಕು ಎಂದರು. ಬಿಜೆಪಿ ಸದಸ್ಯ ಎಸ್.ಸುರೇಶ್ ಕುಮಾರ್ ಮಾತನಾಡಿ, ವಕೀಲರ ಮೇಲೆ ಹಲ್ಲೆ ಮಾಡಿದರೆ ಜೈಲು ಶಿಕ್ಷೆ ವಿಧಿಸಲು ಅವಕಾಶ ಕಲ್ಪಿಸಿದ್ದೀರಾ? ಒಂದು ವೇಳೆ ವಕೀಲರು ಮುಂದೆ ಪ್ರಾಕ್ಟೀಸ್ ಮಾಡಲು ಸಾಧ್ಯವೇ ಇಲ್ಲದಂತ ಪರಿಸ್ಥಿತಿ ಎದುರಾದರೆ ಅವರಿಗೆ ಪರಿಹಾರ ಕೊಡಬೇಕು ಎಂದು ತಿಳಿಸಿದ್ದೀರಾ? ಯಾವ ರೀತಿ ವಕೀಲರ ನೆರವಿಗೆ ಧಾವಿಸುತ್ತೀರಾ ಎಂಬುದರ ಕುರಿತು ಸ್ಪಷ್ಟಣೆ ನಿಡುವಂತೆ ಕೋರಿದರು. ಕಾಂಗ್ರೆಸ್ ಸದಸ್ಯ ಎ.ಎಸ್.ಪೊನ್ನಣ್ಣ ಮಾತನಾಡಿ, ವಕೀಲರ ಮೇಲೆ ಹಲ್ಲೆ ನಡೆಸುವವರಿಗೆ ರಾಜಸ್ಥಾನದಲ್ಲಿರುವಂತೆ ಏಳು ವರ್ಷ ಜೈಲು ಶಿಕ್ಷೆ ವಿಧಿಸಲು ಅವಕಾಶ ಕಲ್ಪಿಸಬೇಕು.

## ವಿದ್ಯುತ್ ಚಾಲಿತ ಮಗ್ಗಗಳಿಗೆ ಉಚಿತ ವಿದ್ಯುತ್



ಬೆಳಗಾವಿ ಸುವರ್ಣಸೌಧ: 1 ರಿಂದ 10 ಹೆಚ್.ಪಿ. ವಿದ್ಯುತ್ ಸಂಪರ್ಕ ಪಡೆದ ವಿದ್ಯುತ್ ಚಾಲಿತ ಮಗ್ಗ ಘಟಕಗಳಿಗೆ ಉಚಿತವಾಗಿ ವಿದ್ಯುತ್ ಪೂರೈಸಿ ಶೂನ್ಯ ಬಿಲ್ ನೀಡಲಾಗುವುದು. ಈ ಕುರಿತು ಸರ್ಕಾರ ಈಗಾಗಲೇ ಆದೇಶ ಹೊರಡಿಸಲಾಗಿದೆ ಎಂದು ಜವಳಿ, ಕಬ್ಬು, ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ್ ಪಾಟೀಲ್ ಹೇಳಿದರು. ಬೆಳಗಾವಿ ಚಳಿಗಾಲದ ಅಧಿವೇಶನಲ್ಲಿ ಶುಕ್ರವಾರಢ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕರ ಪ್ರಶ್ನೆಗಳಿಗೆ ಉತ್ತರಿಸಿ ಅವರು ಮಾತನಾಡಿದರು. 10 ಕ್ಕಿಂತ ಹೆಚ್ಚು ಹಾಗೂ 20 ಹೆಚ್.ಪಿ ವರೆಗಿನ ವಿದ್ಯುತ್ ಮಗ್ಗಗಳ 500 ಯುನಿಟ್‌ವರೆಗಿನ ವಿದ್ಯುತ್ ಬಳಕೆಗೆ ಪ್ರತಿ ಯುನಿಟ್‌ಗೆ ರೂ.1.25 ರಿಯಾಯಿತಿ ನೀಡಲಾಗುವುದು. ಜವಳಿ ಘಟಕಗಳ ಸ್ಥಾಪನೆಗೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದವರಿಗೆ ಘಟಕ ಯೋಜನಾ ವೆಚ್ಚದ ಮೇಲೆ ಶೇ.75 ರಷ್ಟು ಅಥವಾ ಗರಿಷ್ಠ ಬಂಡವಾಳ ಸಹಾಯಧನ ರೂ.2 ಕೋಟಿವರೆಗೆ ನೀಡಲಾಗುತ್ತಿದೆ. ನೂತನ ಜವಳಿ ನೀತಿ ಅನ್ವಯ ಗರಿಷ್ಠ ರೂ.75 ಲಕ್ಷಗಳ ಅವಧಿ ಸಾಲದ ಮೇಲೆ ಮೊದಲ 5 ವರ್ಷಗಳ ಅವಧಿಗೆ ಬಡ್ಡಿ ಸಹಾಯಧನ ಒದಗಿಸಲಾಗುತ್ತಿದೆ. ಸಾಮಾನ್ಯ ವರ್ಗದವರಿಗೆ ರೂ.1 ಸಹಾಯಧನ ಹಾಗೂ ಅತಿ ಸಣ್ಣ ಜವಳಿ ಘಟಕಗಳಿಗೆ ಶೇ.50 ರಷ್ಟು ಅಥವಾ ಗರಿಷ್ಠ ರೂ.50 ಲಕ್ಷದ ವರೆಗೆ ಸಹಾಯಧನ ನೀಡಲಾಗುವುದು ಎಂದರು.

## ಬಯಲು ಸೀಮೆ ಅಡಿಕೆ ಬೆಳೆಗೆ ಪ್ರೋತ್ಸಾಹ ನೀಡಲು ಸದನಲ್ಲಿ ಒತ್ತಾಯ

ಬೆಳಗಾವಿ ಸುವರ್ಣಸೌಧ: ಮಲೆನಾಡಿನ ಪ್ರದೇಶದಲ್ಲಿ ಅಡಿಕೆ ಬೆಳೆಗೆ ನೀಡುತ್ತಿರುವ ಪ್ರೋತ್ಸಾಹ ಹಾಗೂ ವಿಮೆ ಸೌಲಭ್ಯಗಳನ್ನು ಬಯಲು ಸೀಮೆ ಅಡಿಕೆ ಬೆಳೆಗಾರರಿಗೂ ನೀಡಬೇಕು ಎಂದು ಶಾಸಕ ಪ್ರಕಾಶ್ ಕೋಳಿವಾಡ ಒತ್ತಾಯಿಸಿದರು. ಬೆಳಗಾವಿ ಚಳಿಗಾಲದ ಅಧಿವೇಶನಲ್ಲಿ ಶುಕ್ರವಾರಢ ಪ್ರಶ್ನೋತ್ತರ ಕಲಾಪದಲ್ಲಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಸರ್ಕಾರ ಉತ್ತರಿಸುವ ವೇಳೆ ಮಾತನಾಡಿದರು.

ರಾಣೆಬೆನ್ನೂರು ತಾಲ್ಲೂಕಿನಲ್ಲಿ ಸುಮಾರು 7000 ಎಕರೆ ಪ್ರದೇಶದಲ್ಲಿ ಅಡಿಕೆ ಬೆಳೆಯಲಾಗುತ್ತಿದೆ. ಈ ಬೆಳೆಗೆ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆ, ಡ್ರಿಪ್ ಅಳವಡಿಕೆ ಸೇರಿದಂತೆ ಬೆಳೆ ವಿಮೆ ಸೌಲಭ್ಯಗಳು ಇಲ್ಲ. ಇದರಿಂದ ಕ್ಷೇತದ್ರ ಅಡಿಕೆ ಬೆಳಗಾರರಿಗೆ ಅನ್ಯಾಯವಾಗುತ್ತಿದೆ. ಬಯಲು ಸೀಮೆಯ ಚೆನ್ನಗಿರಿ ಹಾಗೂ ಶಿಗ್ಗಾಂವ ತಾಲ್ಲೂಕುಗಳ ರೈತರಿಗೆ ಈ ಯೋಜನೆಗಳ ಸರ್ಕಾರ ವಿಸ್ತರಿಸಿದೆ. ಅಡಿಕೆ ಬೆಳೆಯುವ ರೈತರು ಇದರ ಲಾಭ ಪಡೆಯುತ್ತಿದ್ದಾರೆ.

ಹಾವೇರಿ, ರಾಣೇಬೆನ್ನೂರು ಸೇರಿದಂತೆ ಪ್ರಮುಖವಾಗಿ ಅಡಿಕೆ ಬೆಳೆಯುವ ರಾಜ್ಯದ ಎಲ್ಲಾ ತಾಲ್ಲೂಕುಗಳಿಗೂ ಯೋಜನೆಯನ್ನು ವಿಸ್ತರಿಸುವಂತೆ ಸರ್ಕಾರಕ್ಕೆ ಕೋರಿದರು. ಶಾಸಕ ಪ್ರಕಾಶ್ ಕೋಳಿವಾಡ ಅವರ ಪ್ರಶ್ನೆಗೆ ಉಪ ಸಭಾಧ್ಯಕ್ಷ ರುದ್ರಪ್ಪ ಲಮಾಣಿಯವರು ಸಹ ಧ್ವನಿ ಗೂಡಿಸಿದರು. ತೋಟಗಾರಿಕೆ ಇಲಾಖೆ ಸಚಿವರಿಗೆ ಪರವಾಗಿ ಉತ್ತರಿಸಿದ ಉತನ್ನ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್ ಸಾಂಪ್ರದಾಯಕವಾಗಿ ಅಡಿಕೆ ಬೆಳೆಯುವ ಮಲೆನಾಡು ಹಾಗೂ ಕರಾವಳಿ ಪ್ರದೇಶದಲ್ಲಿ ಸರ್ಕಾರ ಪ್ರೋತ್ಸಾಹ ಕ್ರಮಗಳನ್ನು ಕೈಗೊಳ್ಳುತ್ತಿದೆ. ಮೈದಾನ ಪ್ರದೇಶಗಳಲ್ಲಿ ನೀರಿನ ಕೊರತೆ ಇರುವುದರಿಂದ ಅಡಿಕೆ ಬೆಳೆಯುವುದು ಸೂಕ್ತವಲ್ಲ. ಈ ಹಿನ್ನಲೆಯಲ್ಲಿ ಬಯಲು ಸೀಮೆ ಭಾಗದಲ್ಲಿ ತೋಟಗಾರಿಕೆ ಇಲಾಖೆ ಅಡಿಕೆ ಬದಲಿಗೆ ಪರ್ಯಾಯ ಬೆಳೆಗೆ ಪ್ರೋತ್ಸಾಹ ನೀಡುತ್ತಿದೆ. ಇದರ ಹೊರತಾಗಿಯೂ ಬಯಲು ಸೀಮೆಯಲ್ಲಿ ರೈತರು ಸ್ವ ಇಚ್ಛೇಯಿಂದ ಅಡಕೆ ಬೆಳೆಯುತ್ತಿದ್ದಾರೆ.

ಶಾಸಕರ ಮನವಿಯನ್ನು ತೋಟಗಾರಿಕೆ ಇಲಾಖೆ ಸಚಿವರ ಗಮನಕ್ಕೆ ತರುವುದಾಗಿ ತಿಳಿಸಿದರು.

## ರೈತ ಉತ್ಪಾದಕ ಸಂಘಗಳಿಗೆ 2 ಕೋಟಿ ಅನುದಾನ



ಬೆಳಗಾವಿ ಸುವರ್ಣಸೌಧ: ಸಮಗ್ರ ತೋಟಗಾರಿಕೆ ಯೋಜನೆಯಡಿ ರೈತ ಉತ್ಪಾದಕ ಸಂಸ್ಥೆಗಳಿಗೆ ಆರಂಭಿಕವಾಗಿ ಪ್ರೊತ್ಸಾಹ ನೀಡಲು 2022–23ನೇ ಸಾಲಿನಲ್ಲಿ ರೂ.2.73 ಕೋಟಿ ಬಿಡುಗಡಿ ಮಾಡಲಾಗಿದೆ ಹಾಗೂ 2023–24ನೇ ಸಾಲಿನಲ್ಲಿ ರೂ.2 ಕೋಟಿ ಅನುದಾನವನ್ನು ಮೀಸಲು ಇರಿಸಲಾಗಿದೆ ಎಂದು ಉತನ್ನ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್ ಹೇಳಿದರು.

ಬೆಳಗಾವಿ ಚಳಿಗಾಲದ ಅಧಿವೇಶನಲ್ಲಿ ಶುಕ್ರವಾರಢ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕ ಸುನೀಲ್ ಕುಮಾರ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಅವರ ಪರವಾಗಿ ಉತ್ತರಿಸಿದರು.

ರೈತರ ಬೆಳೆಗಳನ್ನು ಸಂಸ್ಕರಿಸಿ ನೇರವಾಗಿ ಗ್ರಾಹಕರಿಗೆ ತಲುಪಿಸಲು ರೈತ ಉತ್ಪಾದಕ ಸಂಸ್ಥೆಗಳು ಸಹಕಾರಿಯಾಗಿವೆ. ರೈತರು ಉತ್ಪಾದಕ ಸಂಸ್ಥೆಗಳನ್ನು ರಚಿಸಿಕೊಳ್ಳಲು ಆರಂಭದಲ್ಲಿ ಸರ್ಕಾರದಿಂದ, ಸಂಗ್ರಹಣೆ, ಸಂಸ್ಕರಣೆ, ಮತ್ತು ಶೇಖರಣೆ ಘಟಕ ನಿರ್ಮಾಣ, ಯಂತ್ರೋಪಕರಣ ಹಾಗೂ ಇತರೆ ಮೂಲ ಸೌಕರ್ಯಗಳಿಗೆ ಆರ್ಥಿಕ ಸಹಾಯಕ ಒದಗಿಸಲಾಗುವುದು. ರಾಜ್ಯದಲ್ಲಿ 1262 ರೈತ ಉತ್ಪಾದಕ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ ಎಂದರು. ಶಾಸಕ ಸುನೀಲ್ ಕುಮಾರ್ ಮಾತನಾಡಿ, ರೈತ ಉಪಯೋಗಿ ಯೋಜನೆ ಅನುಷ್ಠಾನಗಳು ಬಿಳಂಬವಾಗುತ್ತಿವೆ ಇದರ ಬಗ್ಗೆ ಸರ್ಕಾರ ಗಮನ ಹರಿಸಬೇಕು.

ರಾಜ್ಯದಲ್ಲಿರುವ 1262 ರೈತ ಉತ್ಪಾದಕ ಸಂಸ್ಥೆಗಳಿಗೆ ಸರ್ಕಾರ ಮೀಸಲು ಇರಿಸಿದ ಅನುದಾನ ಸಾಲುವುದಿಲ್ಲ. ಸರ್ಕಾರ ಅನುದಾನವನ್ನು ಹೆಚ್ಚಿಸುವಂತೆ ಒತ್ತಾಯಿಸಿದರು. ಇದೇ ಸಂದರ್ಭದಲ್ಲಿ ಶಾಸಕ ಅರಗ ಜ್ಞಾನೇಂದ್ರ ಮಾತನಾಡಿ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿರುವ ರೈತ ಉತ್ಪಾದಕ ಸಂಸ್ಥೆಗಳಿಗೆ ಸರ್ಕಾರದಿಂದ ವ್ಯಾಪಾರ ಹಾಗೂ ರಫ್ತು ಪರವಾನಿಗೆಯನ್ನು ನೀಡುವಂತೆ ಕೋರಿದರು.

## ವರಾಹಿ ಶಾಶ್ವತ ಕುಡಿಯುವ ನೀರಿನ ಯೋಜನೆ : ಮಾರ್ಚ, ಏಪ್ರಿಲ್ ವೇಳೆಗೆ ಪೂರ್ಣ



ಬೆಳಗಾವಿ ಸುವರ್ಣಸೌಧ : ಉಡುಪಿ ನಗರಕ್ಕೆ ವರಾಹಿ ನದಿಯಿಂದ ಶಾಶ್ವತ ಕುಡಿಯುವ ನೀರು ಒದಗಿಸುವ ಯೋಜನೆ ಮಾರ್ಚ್ ಅಥವಾ ಏಪ್ರಿಲ್ ವೇಳೆ ಪೂರ್ಣಗೊಳ್ಳಲಿದೆ. ಯೋಜನೆಯಿಂದ 40 ಎಂ.ಎಲ್.ಡಿ ನೀರು ಉಡುಪಿ ನಗರಕ್ಕೆ ಲಭಿಸುವುದು ಎಂದು ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವ ಬಿ.ಎಸ್.ಸುರೇಶ್ ಹೇಳಿದರು.

ಬೆಳಗಾವಿ ಚಳಿಗಾಲದ ಅಧಿವೇಶನಲ್ಲಿ ಶುಕ್ರವಾರಢ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕ ಯಶ್‌ಪಾಲ್ ಎ ಸುವರ್ಣ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿ ಅವರು ಮಾತನಾಡಿದರು.

ಕೆ.ಯು.ಐ.ಡಿ.ಎಫ್.ಸಿ ವತಿಯಿಂದ ರೂ.160 ಕೋಟಿ ವೆಚ್ಚದಲ್ಲಿ ವರಾಹಿ ಶಾಶ್ವತ ಕುಡಿಯುವ ನೀರಿನ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆ. ವರಾಹಿ ನದಿ ಮೂಲದಿಂದ ಉಡುಪಿ ನಗರಕ್ಕೆ ನೀರು ಸರಬರಾಜು ಮಾಡಲು ಕ್ವಿಮಿಪ್ ಯೋಜನೆಯಲ್ಲಿ ಹಾಲಾಡಿ ಬಳಿ 45 ಎಂ.ಎಲ್.ಡಿ ನೀರು ಶುದ್ಧೀಕರಣ ಘಟಕವನ್ನು ನಿರ್ಮಾಣ ಮಾಡಲಾಗುತ್ತಿದೆ. ಶುದ್ಧೀಕರಿಸಿದ ನೀರನ್ನು ಮಣಿಪಾಲ್ ಬಳಿ ಇರುವ ಜಲಸಂಗ್ರಹಗಾರಕ್ಕೆ ಪಂಪ್ ಮಾಡಿ ಗುರುತ್ವಾಕರ್ಷಣೆ ಮೂಲಕ ಹೊಸದಾಗಿ ನಿರ್ಮಿಸಲಾಗುತ್ತಿರುವ 07 ಮೇಲ್ಮಟ್ಟದ ಜಲಸಂಗ್ರಹಗಾರಗಳಿಗೆ ಕಳುಹಿಸಿ, ಉಡುಪಿ ನಗರ ಹಾಗೂ ಮಾರ್ಗ ಮಧ್ಯದ ಗ್ರಾಮಗಳಿಗೂ ಶುದ್ಧ ಕುಡಿಯುವ ನೀರನ್ನು ನೀಡಲಾಗುವುದು. ಇದರಿಂದ ನಗರಕ್ಕೆ ಶಾಶ್ವತ ಪರಿಹಾರ ದೊರಕಲಿದೆ ಎಂದರು.

ಸದ್ಯ ಉಡುಪಿ ನಗರಕ್ಕೆ ಸ್ವರ್ಣ ನದಿಯಿಂದ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಸ್ವರ್ಣ ನದಿಗೆ ನಿರ್ಮಿಸಿರುವ ಬಜೆಕಿಂಡಿ ಅಣೆಕಟ್ಟಿನಲ್ಲಿ ಸುಮಾರು 3.5 ಲಕ್ಷ ಟನ್ ಹೂಳು ಸಂಗ್ರಹವಾಗಿದೆ. ಹೂಳು ತಗೆಯಲು ನಗರ ಸಭೆಯು ರೂ.5 ಕೋಟಿ ಯೋಜನೆ ರೂಪಿಸಿದೆ. ಅಣೆಕಟ್ಟಿನಲ್ಲಿ ಹೂಳಿನೊಂದಿಗೆ ಇರುವ ಮರಳನ್ನು ಖಾಸಗಿಯವರು ಬಳಸಿಕೊಂಡು ಯಾವುದೇ ವೆಚ್ಚವಿಲ್ಲದೆ ಹೂಳು ಮತ್ತು ಮರಳನ್ನು ಹೊರತೆಗೆಯಲು ಅನುಮತಿ ನೀಡಬಹುದು ಎಂದು ಉಡುಪಿ ಜಿಲ್ಲಾಧಿಕಾರಿಗಳು ವರದಿ ನೀಡಿದ್ದಾರೆ.

ಈ ಕುರಿತು ಸರ್ಕಾರ ನಿರ್ಧಾರ ತೆಗೆದುಕೊಳ್ಳಲಿದೆ. ಬರುವ ಬೇಸಿಗೆ ವೇಳೆ ನೀರು ಒದಗಿಸಲು ಮುಜಾಂಗ್ರತೆಯ ವಹಿಸಿ, ರೂ.10 ಲಕ್ಷ ಅನುದಾನವನ್ನು ಮೀಸಲು ಇರಿಸಲಾಗಿದೆ. ಅಗತ್ಯ ಬಿದ್ದರೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುವುದು ಎಂದು ಸಚಿವ ಬಿ.ಎಸ್.ಸುರೇಶ್ ಹೇಳಿದರು.

News

## ಬೆಳಗಾವಿ: ಸಂಕೇಶ್ವರ ಗೋದಾಮುಗಳಿಗೆ ಆಹಾರ ಸಚಿವ ಕೆ.ಹೆಚ್. ಮುನಿಯಪ್ಪ ದಿಢೀರ್ ಭೇಟಿ

# ಪಡಿತರ ವಿತರಣೆಯಲ್ಲಿ ಲೋಪದೋಷ ಕಂಡುಬಂದರೆ ಶಿಸ್ತು ಕ್ರಮ



ಬೆಳಗಾವಿ: ಸಾರ್ವಜನಿಕ ಪಡಿತರ ವಿತರಣೆಯಲ್ಲಿ ಲೋಪದೋಷ ಕಂಡುಬಂದರೆ ಅಧಿಕಾರಿ ಹಾಗೂ ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನ ಮಾಪನ ಶಾಸ್ತ್ರ ಇಲಾಖೆ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್. ಮುನಿಯಪ್ಪ ಅವರು ಹೇಳಿದರು.

ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಬೆಳಗಾವಿ ಜಿಲ್ಲೆಯ ಸಂಕೇಶ್ವರನಲ್ಲಿರುವ ಗೋದಾಮಿಗೆ ಸಚಿವರು ದಿಢೀರ್ ಭೇಟಿ ನೀಡಿ ಅಕ್ಕಿ ಹಾಗೂ ಗೋಧಿಯನ್ನು ಪರಿಶೀಲಿಸಿ ಹಾಗೂ ಅಕ್ಕಿ ಚೀಲವನ್ನು ತೂಕದ ಯಂತ್ರದ ಮೇಲೆ ಇಟ್ಟು ತೂಕವನ್ನು ಪರಿಶೀಲಿಸಿ ನಂತರ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು.

ಬೆಳಗಾವಿ ಜಿಲ್ಲೆಯ ಸಂಕೇಶ್ವರನಲ್ಲಿರುವ ಎರಡು ಗೋದಾಮಿನ ಸ್ವಚ್ಛತೆ ಮತ್ತು ದಾಸ್ತಾನು ಅಚ್ಚುಕಟ್ಟಾಗಿದೆ. ಗೋಧಿ ಹಿಟ್ಟು ಸೇರಿದಂತೆ ಎಫ್ ಸಿ ಐ ನಿಂದ ಬಂದಿರುವ ಅಕ್ಕಿಯ ಪ್ರಮಾಣದ ಸಂಪೂರ್ಣ ಮಾಹಿತಿ ಇದೆ ಎಂದರಲ್ಲದೆ, ಹೊಸ ಪಡಿತರ ಚೀಟಿ ಪಡೆಯಲು ಲೋಪದೋಷ ಇರುವ ಕೆಲ ವರದಿ ಮಾಹಿತಿಯನ್ನು ಗ್ರಾಮ ಪಂಚಾಯಿತಿಯ ಉಪಾಧ್ಯಕ್ಷ ಪ್ರಕಾಶ್ ರವರು ನೀಡಿದ್ದಾರೆ ಅದನ್ನು ಲಿಖಿತ ರೂಪದಲ್ಲಿ ಸ್ವೀಕರಿಸಿ ಕ್ರಮ ಜರುಗಿಸುತ್ತೇವೆ. ಯಾವುದೇ ಕಾರಣಕ್ಕೂ ಸಾರ್ವಜನಿಕರಲ್ಲಿ, ಗ್ರಾಹಕರಲ್ಲಿ ಒತ್ತಾಯ ಪೂರ್ವಕವಾಗಿ ಇನ್ಸ್‌ಪೆಕ್ಟರ್, ಶಿರಸ್ತೇದಾರ್ ಸೇರಿದಂತೆ ಆಹಾರ ಗ್ರಾಹಕ ನಾಗರೀಕ ಸರಬರಾಜು ಇಲಾಖೆಯ ಅಧಿಕಾರಿಗಳು ಹಣ ಪಡೆಯುವುದು ಕಂಡಲ್ಲಿ ಶಿಸ್ತಿನ ಕ್ರಮ ಜರುಗಿಸಿ ಅಮಾನತು ಮಾಡಲಾಗುವುದು ಎಂದರು. ಸಾರ್ವಜನಿಕರಿಗೆ, ಗ್ರಾಹಕರಿಗೆ ಉಚಿತವಾಗಿ ನೀಡುವ ಪಡಿತರವನ್ನು ಸಮರ್ಪಕವಾಗಿ ನೀಡಬೇಕು ಅಧಿಕಾರಿ, ಸಿಬ್ಬಂದಿಗಳಿಂದ ಲೋಪದೋಷ ಉಂಟಾದಲ್ಲಿ ಗೋದಾಮಿನಲ್ಲಿ ತೊಂದರೆ ಇದ್ದರೆ ತಾಲೂಕು ಸೊಸೈಟಿಯವರಿಗೆ ತೊಂದರೆ ಇದ್ದರೆ ಪಿಡಿಎಸ್ ಮಾಲೀಕರಿಗೆ ತೊಂದರೆ ಇದ್ದಲ್ಲಿ ಆಯಾ ಭಾಗದ ಸಾರ್ವಜನಿಕರು ಪಂಚಾಯಿತಿ ಅಧ್ಯಕ್ಷರು ಉಪಾಧ್ಯಕ್ಷರು ಮತ್ತು ಸಹಕಾರ ಸಂಘಗಳ ಅಧ್ಯಕ್ಷರು ಉಪಾಧ್ಯಕ್ಷರು ಗಮನಕ್ಕೆ ತೆಗೆದುಕೊಂಡು ಬಂದರೆ ಕ್ರಮ ಜರುಗಿಸಿ, ಪರಿಹಾರ ಸೂಚಿಸಲಾಗುವುದು ಎಂದರು. ಪಡಿತರ ಚೀಟಿ ಹೊಂದಿರುವ ಗ್ರಾಹಕರಿಗೆ ಯಾವುದೇ ಕಾರಣಕ್ಕೂ ತೊಂದರೆ ಉಂಟಾಗಬಾರದು ಶಹಪೂರದಲ್ಲಿ ಆಗಿರುವ ಘಟನೆಗೆ ಈಗಾಗಲೇ ಶಿಸ್ತಿನ ಕ್ರಮ ತೆಗೆದುಕೊಂಡು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಅಧಿಕಾರಿಗಳ ತಂಡ ಪರಿಶೀಲನೆ ಮಾಡಲಾಗುತ್ತಿದೆ ಸಾರ್ವಜನಿಕರಿಗೆ ಯಾವುದೇ ಕುಂದುಕೊರತೆಯಾಗದಂತೆ ಕ್ರಮಬದ್ಧವಾಗಿ ಕಾರ್ಯ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಾರ್ವಜನಿಕರ ಹಿತದೃಷ್ಟಿಯಿಂದ ಅವರಿಗೆ ಸರ್ಕಾರಿ ಸೇವೆಗಳು ಸಮರ್ಪಕವಾಗಿ ತಲುಪಬೇಕೆನ್ನುವುದು ಸರ್ಕಾರದ ಮೂಲ ಉದ್ದೇಶವಾಗಿದೆ. ಜುಲೈ 10 ನೇ ತಾರೀಖಿನಿಂದ ಡಿಬಿಟಿ (ನೇರ ನಗದು ವರ್ಗಾವಣೆ) ಪ್ರಾರಂಭಿಸಿದ್ದೇವೆ. ಬೆಳಗಾವಿ ವಿಭಾಗದಲ್ಲಿ ಮೊದಲನೆಯ ತಿಂಗಳು 46 ಕೋಟಿ ರೂ ಎರಡನೇ ತಿಂಗಳು 50 ಕೋಟಿ 88 ಲಕ್ಷ ಹಾಗೂ ಸೆಪ್ಟೆಂಬರ್ ತಿಂಗಳಿನಲ್ಲಿ 53 ಕೋಟಿ 73 ಲಕ್ಷ, ಅಕ್ಟೋಬರ್ ತಿಂಗಳಿನಲ್ಲಿ 55 ಕೋಟಿ 80 ಲಕ್ಷ, ನವೆಂಬರ್ ತಿಂಗಳ ಮಾಹಿತಿ ಪ್ರಗತಿಯಲ್ಲಿದೆ ಅರ್ಹತಾ ಪಡಿತರ ಚೀಟಿಗೆ ನವೆಂಬರ್ ತಿಂಗಳಿನಲ್ಲಿ 10 ಲಕ್ಷ 6 ಸಾವಿರ 895 ಜುಲೈ ತಿಂಗಳಿನಲ್ಲಿ 8 ಲಕ್ಷ 79 ಸಾವಿರದ 208 ಆಗಸ್ಟ್, ಸೆಪ್ಟೆಂಬರ್ ಅಕ್ಟೋಬರ್ ನವಂಬರ್ ನಲ್ಲಿ ಅಧಿಕಾರಿಗಳು ಕ್ರಮಬದ್ಧವಾಗಿ ಕಾರ್ಯನಿರ್ವಹಿಸಿ 8 ಲಕ್ಷ ಇದ್ದ ಮೊತ್ತವನ್ನು ಮನೆಬಾಗಿಲಿಗೆ ಹೋಗಿ 10 ಲಕ್ಷ ಅಂದರೆ 1ಲಕ್ಷದ 74 ಸಾವಿರ ಜನರಿಗೆ ಬ್ಯಾಂಕ್ ಮಾಹಿತಿ ನವೀಕರಿಸಿ ಪಡಿತರ ಚೀಟಿ ನವೀಕರಿಸಿ 5 ಕೆಜಿ ಅಕ್ಕಿ ಮತ್ತು 170 ರಂತೆ ಹಣವನ್ನು ನೀಡಲಾಗಿದೆ. ಅನ್ನಭಾಗ್ಯ ಯೋಜನೆ ಅಡಿಯಲ್ಲಿ ಅಕ್ಕಿಯ ಅಭಾವ ಇರುವುದರಿಂದ ಹಣವನ್ನು ನೀಡಲಾಗುತ್ತಿದೆ ಮುಂದಿನ ದಿನಗಳಲ್ಲಿ ಆದಷ್ಟು ಬೇಗ 10 ಕೆಜಿ ಅಕ್ಕಿಯನ್ನು ನೀಡಲಾಗುವುದು ಎಂದರು. ಸಂಕೇಶ್ವರದಲ್ಲಿ ಗೋಡೌನ್ ಗಳು ಕ್ರಮಬದ್ಧವಾಗಿದೆ ಮುಂದೆ ಇದೇ ರೀತಿ ನಡೆಸಿಕೊಳ್ಳಲು ಸೂಚನೆ ನೀಡಿದರು.

ಅಂತ್ಯೋದಯ 68356, ಫಲಾನುಭವಿಗಳು 2,68000, ಬಿಪಿಎಲ್ ಕಾರ್ಡುಗಳು 1076000, ಫಲಾನುಭವಿಗಳು 3498606. ಉಳಿತ 20000 ಕಾರ್ಡುಗಳ ವಿತರಣೆಯನ್ನು 15 ದಿನಗಳೊಳಗಾಗಿ ಪರಿಶೀಲನೆ ಮಾಡಿ ವಿತರಿಸುವ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನ ಮಾಪನ ಶಾಸ್ತ್ರ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ ಡಾ ನಟರಾಜ್, ಜಂಟಿ ನಿರ್ದೇಶಕ ಶ್ರೀಶೈಲ ಕಂಕನವಾಡಿ, ವಿಭಾಗ ನಿಯಂತ್ರಕ ಮಾಳಿ, ಕಾನೂನು ಮಾಪನ ಇಲಾಖೆ ಸಹಾಯಕ ನಿಯಂತ್ರಕ ರುದ್ರೇಶ್ ಬಿಸಾಗುಪ್ಪಿ, ಉಪ ನಿರ್ದೇಶಕಿ ಸುಶೀಲಮ್ಮ ಎಪಿಎಂಸಿ ಅಧ್ಯಕ್ಷ ಪ್ರಶಾಂತ ಪಾಟೀಲ, ಸಾಗಾಣಿಕೆ ಗುತ್ತಿಗೆದಾರ ಶಿವಾನಂದ ಮುಡಸಿ, ಆಹಾರ ನಿಗಮದ ಅಧಿಕಾರಿ ಸೋಮೇಶ್ ಮಗದುಮ್ಮ, ಶಿರಸ್ತೇದಾರ್ ಉಸ್ತಾದ, ಗೋದಾಮು ವ್ಯವಸ್ಥಾಪಕ ಲಕ್ಷ್ಮಿ ಮೆದಾರ್ ಹಾಗೂ ಆಹಾರ ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.



ಸುವರ್ಣ ಸೌಧದ ಮಾಧ್ಯಮ ಊಟದ ಆವರಣಕ್ಕೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಶ್ರೀ ಹೇಮಂತ್ ಎಂ ನಿಂಬಾಳ್ಕರ್ ಹಾಗೂ ಬೆಳಗಾವಿ ಜಿಲ್ಲಾಧಿಕಾರಿ ಶ್ರೀ ನಿತೇಶ್ ಕೆ.ಪಾಟೀಲ ಇವರು ಭೇಟಿ ನೀಡಿ ಮಾಧ್ಯಮದವರ ಊಟೋಪಚಾರ, ವಸತಿ ಹಾಗೂ ಅಧಿವೇಶನದ ಕುರಿತು ವಿಚಾರಿಸಿದ ಕ್ಷಣ



ಸುವರ್ಣ ಕರ್ನಾಟಕ 50 ರಸಂಭ್ರಮ ಸುವರ್ಣ ವಿಧಾನಸೌಧ ಮುಂಭಾಗದಲ್ಲಿ ಎರಡು ವಾರಗಳ ಕಾಲ ಚಳಿ ಚಳಿಗಾಲ ಅಧಿವೇಶನ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಯೋಜಿಸಿರುವ ವಿವಿಧ ವೈವಿಧ್ಯಮಯ ಸಾಂಸ್ಕೃತಿ ಕಾರ್ಯಕ್ರಮವನ್ನು ನೆರವೇರಿಸಿದರು ಕೊನೆ ದಿನ ಇಂದು ಜಾನಪದ ಕಲಾ ಸಂಸ್ಕೃತಿಯನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅವರು ಅರ್ಧ ಗಂಟೆಗಿಂತ ಹೆಚ್ಚು ಜಾನಪದ ಸಂಗೀತವನ್ನು ವೀಕ್ಷಿಸಿದರು.

# ಸಂತ್ರಸ್ತೆಗೆ ಅಗತ್ಯ ನೆರವಿಗೆ ಹೆಬ್ಬಾಳ್ಕರ್ ಸೂಚನೆ



ಬೆಳಗಾವಿ: ಇತ್ತೀಚೆಗೆ ಬೆಳಗಾವಿ ಜಿಲ್ಲೆ ವೆಂಟಮೂರಿ ಗ್ರಾಮದಲ್ಲಿ ಮಹಿಳೆಯೊಬ್ಬರನ್ನು ಬೆತ್ತಲೆಗೊಳಿಸಿ ನಡುರಸ್ತೆಯಲ್ಲಿ ಕಂಬಕ್ಕೆ ಕಟ್ಟಿ ಹಲ್ಲೆ ಮಾಡಿರುವ ಘಟನೆ ನಡೆದಿದೆ. ಇಡೀ ಸಮಾಜವೇ ತಲೆತಗ್ಗಿಸುವಂತಹ ಕೃತ್ಯ ಇದಾಗಿದ್ದು, ಸಂತ್ರಸ್ತೆಗೆ ಸೂಕ್ತ ನೆರವು ನೀಡಲು ಕ್ರಮ ತೆಗೆದುಕೊಳ್ಳುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸೂಚಿಸಿದ್ದಾರೆ. ಈ ಕುರಿತು ಅವರು ಜಿಲ್ಲಾಧಿಕಾರಿ ಮತ್ತು ಇಲಾಖೆಯ ಉಪನಿರ್ದೇಶಕರಿಗೆ ಸೂಚನೆ ನೀಡಿದ್ದಾರೆ. ಘಟನೆ ನಂತರ ನಾನೂ ಕೂಡ ಸಂತ್ರಸ್ತ ಮಹಿಳೆಯನ್ನು ಭೇಟಿ ಮಾಡಿ ಅವರಿಗೆ ಧೈರ್ಯ ತುಂಬಿ ಸಾಂತ್ವನ ಹೇಳಿದ್ದೇನೆ. ಇಂತಹ ಘಟನೆಗಳು ಸಮಾಜದಲ್ಲಿ ಮರುಕಳಿಸಬಾರದು ಹಾಗೂ ಅನ್ಯಾಯಕ್ಕೆ ಒಳಗಾದ ಮಹಿಳೆಗೆ ನ್ಯಾಯ ಕೊಡಿಸುವ ನಿಟ್ಟಿನಲ್ಲಿ ನಾವೆಲ್ಲಾ ಕೆಲಸ ಮಾಡಬೇಕಿದೆ ಎಂದಿದ್ದಾರೆ. ಸಂತ್ರಸ್ತ ಮಹಿಳೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅಗತ್ಯವಿರುವ ಎಲ್ಲಾ ಸೌಲತ್ತುಗಳನ್ನು ಒದಗಿಸಿಕೊಟ್ಟು, ಅವರಿಗೆ ನ್ಯಾಯ ಒದಗಿಸಿಕೊಡಲು ಬೇಕಾದ ಎಲ್ಲಾ ಕ್ರಮಗಳನ್ನು ತುರ್ತಾಗಿ ಕೈಗೊಳ್ಳುವುದು ಹಾಗೂ ಮಹಿಳೆಗೆ ಇಲಾಖೆ ವತಿಯಿಂದ ಪರಿಹಾರಧನ ನೀಡಲ ತುರ್ತಾಗಿ ಕ್ರಮ ವಹಿಸಲು ಜಿಲ್ಲಾಧಿಕಾರಿಗಳಿಗೆ ಸೂಚಿಸಿದ್ದಾರೆ.

# ಮಹಿಳೆಯ ಮೇಲೆ ಹಲ್ಲೆಗೈದ ಪ್ರಕರಣ ಖಂಡಿಸಿ ಪ್ರತಿಭಟಣೆ



ಬೆಳಗಾವಿ: ಇಂದು ದಿನಾಂಕ 15–12–2023 ರಂದು ಭಾರತೀಯ ಜನತಾ ಪಾರ್ಟಿ (ಬಿಜೆಪಿ) ರಾಜ್ಯಾಧ್ಯಕ್ಷರಾದ ಶ್ರೀ. ವಿಜಯೇಂದ್ರ ಯಡಿಯೂರಪ್ಪ ಜಿ, ಹಾಗೂ ವಿರೋಧ ಪಕ್ಷ ನಾಯಕರಾದ ಶ್ರೀ. ಆರ್. ಅಶೋಕರವರ ನೇತೃತ್ವದಲ್ಲಿ ಮತ್ತು ಬೆಳಗಾವಿ ಬಿಜೆಪಿ ಮಹಾನಗರ ಜಿಲ್ಲೆ ಇವರ ವತಿಯಿಂದ ಬೆಳಗಾವಿಯಲ್ಲಿ ಪರಿಶಿಷ್ಟ ಪಂಗಡದ ಮಹಿಳೆಯ ಮೇಲೆ ನಡೆದ ದೌರ್ಜನ್ಯದ ಕುರಿತು ಪ್ರತಿಭಟನಾ ಮೆರವಣಿಗೆ ನಡೆಸಿ ವಸ್ತುಸ್ಥಿತಿ ಅರಿತು ಪ್ರಕರಣದ ಕುರಿತು ಶೀಘ್ರದಲ್ಲಿ ತಪ್ಪಿತಸ್ಥರಿಗೆ ಕಾನೂನಿನ ಪ್ರಕಾರ ಕಠಿಣ ಶಿಕ್ಷೆ ಆಗಬೇಕೆಂದು ಬೃಹತ ಸಭೆ ನಡೆಸಲಾಯಿತು.ನಗರದ ಚನ್ನಮ್ಮ ವೃತ್ತದಿಂದ ಮಾನ್ಯ ಜಿಲ್ಲಾಧಿಕಾರಿ ಕಚೇರಿವರೆಗೆ ನಡೆದ ಈ ಕಾರ್ಯಕ್ರಮದಲ್ಲಿ ರಾಜ್ಯ ಪದಾಧಿಕಾರಿಗಳು, ಶಾಸಕರು, ಸಂಸದರು, ಮುಖಂಡರು, ಬಿಜೆಪಿ ಬೆಳಗಾವಿ ಮಹಾನಗರ ಜಿಲ್ಲಾಧ್ಯಕ್ಷರು ಅನಿಲ ಬೆನಕೆ, ಗ್ರಾಮೀಣ ಜಿಲ್ಲಾಧ್ಯಕ್ಷರು ಸಂಜಯ ಪಾಟೀಲ, ಚಿಕ್ಕೋಡಿ ಸಂಸದರು ಅಣ್ಣಾಸಹೇಬ ಜೊಲ್ಲೆ, ಮಹಾಪೌರ ಶೋಭಾ ಸೋಮನಾಚೆ, ಮಹೇಶ ಕುಮಟಳ್ಳಿ, ವಿರೇಶ ಕಿವಡಸನ್ನಾವರ ಮತ್ತು ಬಿಜೆಪಿ ಬೆಳಗಾವಿ ಮಹಾನಗರ ಜಿಲ್ಲಾ ಹಾಗೂ ಉತ್ತರ ಮಂಡಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ದೇವಸ್ಥಾನ ಕಟ್ಟಡ ಉದ್ಘಾಟಿಸಿದ ಹೆಬ್ಬಾಳಕರ್



ಬೆಳಗಾವಿ: ಹಂಗರಗಾ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡ ಶ್ರೀ ಮರಗಾಯಿ ದೇವಿ ದೇವಸ್ಥಾನದ ಕಟ್ಟಡವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಶುಕ್ರವಾರ ಉದ್ಘಾಟಿಸಿದರು.

ಇದೇ ಸಮಯದಲ್ಲಿ ವಾಸ್ತುಶಾಂತಿ, ಕಳಸಾರೋಹನ, ಪ್ರಾಣ ಪ್ರತಿಷ್ಠಾಪನೆ ಹಾಗೂ ಅಭಿಷೇಕ ಕಾರ್ಯಕ್ರಮದಲ್ಲಿ ಸಹ ಅವರು ಪಾಲ್ಗೊಂಡರು. ಈ ಸಮಯದಲ್ಲಿ ಗ್ರಾಮದ ಹಿರಿಯರು, ಬಾಳು ಪಾಟೀಲ, ವಿಷ್ಣು ಸೋನಾಲ್ಕರ್, ಗೋಪಾಲ್ ಘೋಡ್ಸೆ, ಉಮೇಶ ಸೋನಾಲ್ಕರ್, ದಿಲೀಪ್ ಕಾಂಬಳೆ, ಕೃಷ್ಣ ಹುಂದ್ರೆ, ಸುಭಾಷ್ ತಳವಾರ್, ಯಶವಂತ ನಾಯ್ಕ್, ಮಲ್ಲಪ್ಪ ಕಾಂಬಳೆ, ನಿವೃತ್ತಿ ಕಾಂಬಳೆ, ಮೀನಾ ಘೋಡ್ಸೆ, ಸವಿತಾ ನಾಯಕ್, ರಾಮಚಂದ್ರ ಹಲಕರಣೀಕರ್ ಉಪಸ್ಥಿತರಿದ್ದರು.

# ಸ್ಟಾರ್ಟ್‌ಅಪ್‌ಗಳ ಉತ್ತೇಜನಕ್ಕೆ' ಪ್ರಾಶಸ್ತ್ಯದ ಸಾರ್ವಜನಿಕ ಸಂಗ್ರಹಣೆ ನೀತಿ'





ಬೆಳಗಾವಿ, ಡಿಸೆಂಬರ್ 15 2023*: ಸ್ಥಳೀಯ ನವೋದ್ಯಮಗಳನ್ನು ಉತ್ತೇಜಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ 'ಪ್ರಾಶಸ್ತ್ಯದ ಸಾರ್ವಜನಿಕ ಸಂಗ್ರಹಣೆ ನೀತಿ' ರೂಪಿಸಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ರಾಜ್ಯದಲ್ಲಿ ಅಭಿವೃದ್ಧಿ ಹೊಂದುತ್ತಿರುವ ಐಟಿ, ಇಎಸ್‌ಡಿಎಂ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ವಲಯಗಳಿಗೆ ಒತ್ತು ನೀಡುವ ನಿಟ್ಟಿನಲ್ಲಿ ಹುಬ್ಬಳ್ಳಿ–ಧಾರವಾಡ–ಬೆಳಗಾವಿ (ಹೆಚ್‌ಡಿಬಿ) ಕ್ಲಸ್ಟರ್‌ನಲ್ಲಿ ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ (ಕೆಡಿಇಎಂ) ಬೆಳಗಾವಿಯಲ್ಲಿ ಶುಕ್ರವಾರ ಆಯೋಜಿಸಿದ್ದ'ಟೆಕ್ಸೆಲರೇಶನ್'ನ 3 ನೇ ಆವೃತ್ತಿಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಉದ್ಯಮಿಗಳ ಜತೆ ಸಚಿವರು ಸಂವಾದ ನಡೆಸಿದರು.

"ಬಿಯಾಂಡ್ ಬೆಂಗಳೂರು ಯೋಜನೆಯಡಿ ಹೂಡಿಕೆ ಮಾಡಿ, ಸ್ಟಾರ್ಟ್‌ಅಪ್ ಸೆಲ್‌ನಲ್ಲಿ ನೋಂದಣಿಯಾದ ನವೋದ್ಯಮಗಳ ಉತ್ಪನ್ನವನ್ನು ಸರ್ಕಾರವೇ ಖರೀದಿಸುವ ಉದ್ದೇಶದಿಂದ ಈ ನೀತಿ ರೂಪಿಸಲಾಗುವುದು. ಈ ಸಂಬಂಧ ಅರ್ಜಿ ಸಲ್ಲಿಸಲು ಇದ್ದ ಗಡುವನ್ನು 2024ರ ಜನವರಿ 5ರವಗೆಗೆ ವಿಸ್ತರಿಸಲಾಗುವುದು. ಈ ನೀತಿ ಮೂಲಕ ರೀತಿ ಮೇಡ್ ಇನ್ ಕರ್ನಾಟಕದ ಉತ್ಪನ್ನಗಳನ್ನು ಖರೀದಿಸಿ, ಸ್ಟಾರ್ಟ್‌ಅಪ್‌ಗಳನ್ನು ಪೋಷಿಸಲು ನಮ್ಮ ಸರ್ಕಾರ ಬದ್ಧ," ಎಂದರು. "ರಾಜ್ಯದ ಎರಡು ಮತ್ತು ಮೂರನೇ ಹಂತದ ನಗರಗಳ ಅಭಿವೃದ್ಧಿಗೆ ಬದ್ಧವಾಗಿ, ಬಿಯಾಂಡ್ ಬೆಂಗಳೂರು ಯೋಜನೆಗೆ ಮತ್ತಷ್ಟು ಬಲ ತುಂಬಲಾಗುವುದು. ಇಂಥ ನಗರಗಳಲ್ಲಿ ಹೆಚ್ಚು ಉದ್ಯಮಗಳು ಸ್ಥಾಪನೆಯಾದರೆ, ಸ್ಥಳೀಯವಾಗಿ ಹೆಚ್ಚು ಉದ್ಯೋಗಾವಕಾಶಗಳು ಸೃಷ್ಟಿಯಾಗುತ್ತದೆ,"ಎಂದರು.

"ಇತ್ತೀಚೆಗೆ ಅಮೆರಿಕಕ್ಕೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಹಲವಾರು ಸಭೆಗಳಲ್ಲಿ ಪಾಲ್ಗೊಂಡಿದ್ದೆ. ಅಲ್ಲಿ ಅವರು ಮುಂದಿಟ್ಟ ಬೇಡಿಕೆ ಒಂದೇ, ಅದು ಪ್ರತಿಭಾನ್ವಿತರ ಬೇಡಿಕೆ. ಭಾರತದಿಂದ ಮಾತ್ರ ಅದನ್ನು ಪೂರೈಸಲು ಸಾಧ್ಯ ಎಂಬುದು ಅವರ ನಂಬಿಕೆ. ದೇಶದಿಂದ ಅಂದರೆ ಅದು ರಾಜ್ಯದಿಂದ ಎಂಬುದು ನಮಗೆ ಸ್ಪಷ್ಟವಾಗಿದೆ. ಅದಕ್ಕಾಗಿಯೇ 'ಕೌಶಲ ಸಲಹಾ ಸಮಿತಿ'ಯ ನೇತೃತ್ವವನ್ನು ನಾನೇ ವಹಿಸಿದ್ದೇನೆ. ದೇಶದ ಮೊದಲ ಇಂಥ ಸಮಿತಿ ಇದಾಗಿದೆ. ಉದ್ಯಮಗಳ ಬೇಡಿಕೆಗೆ ಪೂರಕವಾಗಿ ನುರಿತ ಕೆಲಸಗಾರರನ್ನು ಪೂರೈಸುವ ಸಾಮರ್ಥ್ಯ ನಮ್ಮ ರಾಜ್ಯಕ್ಕಿದೆ. ಉಳಿದೆಲ್ಲ ರಾಜ್ಯಗಳಿಗಿಂತ ನಾವು ಮುಂದಿದ್ದೇವೆ,"ಎಂದು ಹೇಳಿದರು. "ಸೆಂಟರ್ ಆಫ್ ಎಕ್ಸಲೆನ್ಸ್– ಫಿನ್‌ಟೆಕ್, ಗೇಮಿಂಗ್ ಆಕ್ಸಿಲರೇಟರ್, ಹೆಲ್ತ್ ಸೈನ್ಸ್, ಬಯೋಟೆಕ್ ಆಕ್ಸಿಲರೇಟರ್‌ಗಳನ್ನು ಸ್ಥಾಪಿಸುವ ಗುರಿ ಇದ್ದು, ಈ ಕ್ಷೇತ್ರಗಳಲ್ಲಿ ಪ್ರಾವಿಣ್ಯತೆ ಇರುವವರಿಗೆ ಇವುಗಳನ್ನು ನಡೆಸುವ ಹೊಣೆ ವಹಿಸಲಾಗುತ್ತದೆ. ರಾಜ್ಯ ಬೇರೆ ಬೇರೆ ಭಾಗಗಳಲ್ಲಿ ಸ್ಥಾಪಿಸಲಾಗುವ ಇಂಥ ಈ ಶ್ರೇಷ್ಠತಾ ಕೇಂದ್ರಗಳಿಗೆ ಎಲ್ಲ ರೀತಿಯ ಬೆಂಬಲ ನೀಡಲು ನಮ್ಮ ಸರ್ಕಾರ ಸಿದ್ಧ," ಎಂದರು.

**ಪ್ರಗತಿಯ ಹಾದಿಯಲ್ಲಿ ಹೆಚ್‌ಬಿಡಿ ಕ್ಲಸ್ಟರ್**ಹೆಚ್‌ಬಿಡಿ ಕ್ಲಸ್ಟರ್‌ನಲ್ಲಿ 16 ಹೊಸ ಕಂಪನಿಗಳು ತಲೆ ಎತ್ತಿದ್ದು, 4 ಕಂಪನಿಗಳು ತಮ್ಮ ಉದ್ಯಮಗಳ ವಿಸ್ತರಣೆ ಮಾಡಿವೆ. ಕ್ಲಸ್ಟರ್ ಉದ್ಯಮ ಸ್ಥಾಪಿಸಲು 40 ಕಂಪನಿಗಳು ಮುಂದೆ ಬಂದಿವೆ. ಜತೆಗೆ, ಒಂದು ಉತ್ಪಾದನಾ ಘಟಕ ಸಹ ಆರಂಭವಾಗಿದ್ದು ಇದರಿಂದ 3,000 ಜನರಿಗೆ ಉದ್ಯೋಗ ಲಭಿಸಿದೆ. ಬರೋಬ್ಬರಿ 25 ಕೋಟಿ ರೂ. ಬಂಡವಾಳದೊಂದಿಗೆ 150 ಸ್ಟಾರ್ಟ್‌ಅಪ್‌ಗಳು ಕಾರ್ಯಾರಂಭಿಸಿವೆ.

**ಟೆಕ್ಸೆಲರೇಶನ್'ಸಂವಾದ** ರಾಜ್ಯದಾದ್ಯಂತ ಸ್ಟಾರ್ಟ್‌ಅಪ್‌ಗಳಿಗೆ ಬಂಡವಾಳ ಲಭ್ಯತೆಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಉಪಕ್ರಮಗಳ ಬಗ್ಗೆ ಎಲೆಕ್ಟ್ರಾನಿಕ್ಸ್ ಇಲಾಖೆ ನಿರ್ದೇಶಕರು, ಕಿಟ್ಸ್ ವ್ಯವಸ್ಥಾಪಕ ನಿರ್ದೇಶಕ ದರ್ಶನ್ ಎಚ್.ವಿ. ಮಾತನಾಡಿದರು. ಇದಲ್ಲದೇ, ನಾಗರಿಕ ಸ್ನೇಹಿ ಸ್ಟಾರ್ಟ್‌ಅಪ್‌ಗಳು, ಉದಯೋನ್ಮುಖ ಕ್ಲಸ್ಟರ್‌ಗಳಲ್ಲಿ ಇಎಸ್‌ಡಿಎಂ ಭವಿಷ್ಯ, ಎಂಜಿನಿಯರಿಂಗ್ ಮತ್ತು ವಿನ್ಯಾಸ ಕೇಂದ್ರವಾಗಿ ಹೆಚ್‌ಡಿಬಿ ಕ್ಲಸ್ಟರ್, ಕ್ಲಸ್ಟರ್‌ನಲ್ಲಿ ಆರಂಭಿಕ ಪರಿಸರ ವ್ಯವಸ್ಥೆಗೆ ಬಂಡವಾಳ, ಹೆಚ್‌ಡಿಬಿ ಕ್ಲಸ್ಟರ್‌ನೊಂದಿಗೆ ಜಾಗತಿಕ ಸಾಮರ್ಥ್ಯ ಕೇಂದ್ರಗಳ ಜೋಡಣೆ, ಕರ್ನಾಟಕ ಸ್ಕಿಲ್ ಕನೆಕ್ಟ್ ಪೋರ್ಟಲ್ ಮತ್ತು ಜಿಸಿಸಿಯ ಬೆಳವಣಿಗೆಗೆ ಇತರ ಉಪಕ್ರಮಗಳು, 100 ದಿನಗಳಲ್ಲಿ 1000 ಉದ್ಯಮ–ಸಿದ್ಧ ವೃತ್ತಿಪರರ ರೂಪಿಸುವ ಬಗ್ಗೆ ಸಂವಾದ ನಡೆಯಿತು.

**ಉದ್ಯಮಿಗಳಿಗೆ ಸನ್ಮಾನ:** ಹೆಚ್‌ಡಿಬಿ ಕ್ಲಸ್ಟರ್ ಸೀಡ್ ಫಂಡ್‌ಗೆ 2 ಕೋಟಿ ರೂ. ನೀಡಿದ್ದ ಗೋಲ್ಡ್ ಪ್ಲಸ್‌ನ ಸುಭಾಷ್ ತ್ಯಾಗಿ ಹಾಗೂ ಹೆಚ್‌ಬಿಡಿ ಕ್ಲಸ್ಟರ್ ಲೀಡ್ ಇಂಡಸ್ಟ್ರಿ ಆಂಕರ್ ವೆಂಕಟೇಶ್ ಪಾಟೀಲ್ ಅವರನ್ನು ಸಚಿವರು ಸನ್ಮಾನಿಸಿದರು. ಸಮಾರೋಪ ಸಮಾರಂಭದಲ್ಲಿ ಹೆಚ್‌ಡಿಬಿ ಕ್ಲಸ್ಟರ್‌ನ ಉದ್ಯಮಿಗಳನ್ನು ಅಭಿನಂದಿಸಲಾಯಿತು. ನಂತರ ಕೆಎಲ್‌ಇ ಟೆಕ್, ಐಎಂಇಆರ್, ಜಿಐಟಿ ಜತೆಗಿನ ಒಪ್ಪಂದ ಪತ್ರಕ್ಕೆ ಕೆಡಿಇಎಂ ಸಹಿ ಹಾಕಿತು. ನವೋದ್ಯಮಗಳ ಉತ್ಪನ್ನಗಳ ಬಿಡುಗಡೆಗೂ ಕಾರ್ಯಕ್ರಮ ಸಾಕ್ಷಿಯಾಯಿತು.


# ವಿಧಾನ ಪರಿಷತ್‌ನಲ್ಲಿ 57 ಗಂಟೆ ನಡೆದ ಕಾರ್ಯ ಕಲಾಪ



ಬೆಳಗಾವಿ: ಡಿಸೆಂಬರ್ 4 ರಿಂದ ಡಿಸೆಂಬರ್ 15ರವರೆಗೆ 10 ದಿನಗಳ ಕರ್ನಾಟಕ ವಿಧಾನ ಮಂಡಲ ಅಧಿವೇಶನದಲ್ಲಿ ವಿಧಾನ ಪರಿಷತ್ತಿನಲ್ಲಿ ಒಟ್ಟು 57 ಗಂಟೆ 45 ನಿಮಿಷಗಳ ಆರೋಗ್ಯಕರ ಕಾರ್ಯಕಲಾಪ ನಡೆದಿದೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅವರು ತಿಳಿಸಿದರು.

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಒಟ್ಟು 17 ವಿಧೇಯಕಗಳಿಗೆ ವಿಧಾನ ಪರಿಷತ್ತು ತನ್ನ ಸಹಮತಿಯನ್ನು ನೀಡಿದೆ. ಒಂದು ಅಧಿಕೃತ ನಿರ್ಣಯವು ಸರ್ವಾನುಮತದಿಂದ ಅಂಗೀಕಾರವಾಗಿದೆ. ಈ ಅಧಿವೇಶನದಲ್ಲಿ ಒಟ್ಟು 1219 ಪ್ರಶ್ನೆಗಳನ್ನು ಸ್ವೀಕರಿಸಿದ್ದು, ಅದರಲ್ಲಿ 150 ಪ್ರಶ್ನೆಗಳನ್ನು ಚುಕ್ಕೆ ಗುರುತಿನ ಪ್ರಶ್ನೆಗಳನ್ನಾಗಿ ಅಂಗೀಕರಿಸಿದ್ದು ಅವುಗಳ ಪೈಕಿ 103 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 41 ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು. ಲಿಖಿತ ಮೂಲಕ ಉತ್ತರಿಸುವ ಒಟ್ಟು 1057 ಪ್ರಶ್ನೆಗಳ ಪೈಕಿ 970 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು ಎಂದು ತಿಳಿಸಿದರು. ಕಳೆದ ಅಧಿವೇಶನದಿಂದೀಚೆಗೆ ನಿಧನರಾದ ಒಟ್ಟು 11 ಗಣ್ಯರುಗಳಿಗೆ, ಸೇನಾ ಕ್ಯಾಪ್ಟನ್ ಪ್ರಾಂಜಲ್ ಸೇರಿದಂತೆ ಕ್ಯಾಪ್ಟನ್ ಶುಭಂ ಗುಪ್ತಾ, ಹವಲ್ದಾರ ಅಬ್ದುಲ ಮಜೀಕ್, ಲಾನ್ಸ್ ನಾಯ್ಕ್ ಸಂಜಯ್ ಬಿಸ್ಟ್ ಮತ್ತು ಸಚಿನ್ ಲಾರ್ ಹಾಗೂ ಇತರ ವೀರ ಯೋಧರುಗಳಿಗೆ ಮತ್ತು ಐತಿಹಾಸಿಕ ಮೈಸೂರು ದಸರಾದ ಕೇಂದ್ರ ಬಿಂದುವಾಗಿದ್ದ ಗಜರಾಜ ವೀರ ಅರ್ಜುನನಿಗೆ ಸದನವು ತನ್ನ ಸಂತಾಪವನ್ನು ವ್ಯಕ್ತಪಡಿಸಿದೆ ಎಂದು ತಿಳಿಸಿದರು. 2023–2024ನೇ ಸಾಲಿನ ಆಯವ್ಯಯ ಅಂದಾಜುಗಳ ಮೊದಲನೆ ಕಂತು ಹಾಗೂ 2023–24ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯವಾರ್ಷಿಕ ಪರಿಶೀಲನಾ ವರದಿಯನ್ನು ಮಂಡಿಸಲಾಯಿತು ಎಂದು ತಿಳಿಸಿದರು. ರಾಜ್ಯದ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳ ಸಂಬಂಧ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯ ಕಾಲಾವಧಿಯನ್ನು ದಿ:22.10.2023 ರಿಂದ 06 ತಿಂಗಳವರೆಗೆ. ರಾಜ್ಯದಲ್ಲಿರುವ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಕ್ಲಬ್‌ಗಳ ಕಾರ್ಯವೈಖರಿ ಮತ್ತು ಚಟುವಟಿಕೆಗಳನ್ನು ಪರಿಶೀಲಿಸಲು ರಚಿಸಲಾಗಿರುವ ಸದನ ಸಮಿತಿಯ ಕಾಲಾವಧಿಯನ್ನು ದಿನಾಂಕ 22.09.2023 ರಿಂದ 06 ತಿಂಗಳವರೆಗೆ ಹಾಗೂ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2023ನ್ನು ಪರಿಶೀಲಿಸಲು ರಚಿಸಲಾಗಿರುವ ಪರಿಶೀಲನಾ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:09.12.2023 ರಿಂದ 03 ತಿಂಗಳವರೆಗೆ ವಿಸ್ತರಿಸುವ ಪ್ರಸ್ತಾವಗಳನ್ನು ಮಂಡಿಸಿ.ಸದನದ ಸಹಮತಿ ಪಡೆಯಲಾಯಿತು ಎಂದು ತಿಳಿಸಿದರು. ನಿಯಮ 59 ರಡಿಯಲ್ಲಿ ಒಟ್ಟು 05 ಸೂಚನೆಗಳನ್ನು ಸ್ವೀಕರಿಸಲಾಗಿದ್ದು, ಆ ಪೈಕಿ 01 ಸೂಚನೆಯನ್ನು ನಿಯಮ 330 ರಡಿ ಚರ್ಚಿಸಿ ಉತ್ತರಿಸಲಾಯಿತು. ಉಳಿದ 03 ಸೂಚನೆಗಳನ್ನು ನಿಯಮ 68 ಕ್ಕೆ ಪರಿವರ್ತಿಸಲಾಗಿದ್ದು, 01 ಸೂಚನೆಯನ್ನು ಚರ್ಚಿಸಿ ಉತ್ತರಿಸಲಾಗಿರುತ್ತದೆ ಹಾಗೂ 01 ಸೂಚನೆಯನ್ನು ತಿರಸ್ಕರಿಸಲಾಗಿರುತ್ತದೆ ಎಂದರು. ನಿಯಮ 58 ರಡಿಯಲ್ಲಿ ಅರ್ಧಗಂಟೆ ಕಾಲಾವಧಿ ಚರ್ಚೆಗಾಗಿ ಒಟ್ಟು 04 ಸೂಚನೆಗಳನ್ನು ಸ್ವೀಕರಿಸಲಾಗಿರುತ್ತದೆ. ಯಾವುದೇ ಸೂಚನೆಗಳನ್ನು ಚರ್ಚಿಸಿರುವುದಿಲ್ಲ. ನಿಯಮ 72 ರಡಿಯಲ್ಲಿ 164 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 09 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 69 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು. ನಿಯಮ 330 ರಡಿಯಲ್ಲಿ 93 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 06 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 35 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು. ಎರಡು ಅರ್ಜಿಗಳು ಹಾಗೂ ಒಂದು ಹಕ್ಕುಚ್ಯುತಿ ಸೂಚನೆಯನ್ನು ಸದನದಲ್ಲಿ ಮಂಡಿಸಲಾಯಿತು. ಶೂನ್ಯ ವೇಳೆ ಪ್ರಸ್ತಾವನೆಯ ಒಟ್ಟು 90ಕ್ಕೂ ಅಧಿಕ ಸೂಚನೆಗಳ ಪೈಕಿ 52 ಸೂಚನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಯಿತು. ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿ ಕುರಿತು ಚರ್ಚಿಸಿ ಉತ್ತರಿಸಲಾಯಿತು ಎಂದು ತಿಳಿಸಿದರು.

# ಸುವರ್ಣ ಸಂಭ್ರಮದ ಬೆಳಗಾವಿ ಚಳಿಗಾಲದ ಅಧಿವೇಶನಕ್ಕೆ ತೆರೆ: ಅನಿರ್ದಿಷ್ಟ ಅವಧಿಗೆ ಸದನ ಮುಂದೂಡಿಕೆ



ಬೆಳಗಾವಿ: ಕರ್ನಾಟಕ ಎಂದು ಹೆಸರಾಗಿ 50ವರ್ಷ ಪೂರ್ಣಗೊಂಡ ಹಿನ್ನಲೆಯಲ್ಲಿ ಸುವರ್ಣ ಕರ್ನಾಟಕ ಸಂಭ್ರಮ ರಾಜ್ಯದೆಲ್ಲಡೆ ಮನೆ ಮಾಡಿದೆ. ಈ ಸಂಭ್ರಮದ ನಡುವೆಯೇ ಜರುಗಿದ ಬೆಳಗಾವಿ ಅಧಿವೇಶನಕ್ಕೆ ಶುಕ್ರವಾರ ತೆರೆ ಬಿದ್ದಿದ್ದು, ವಿಧಾನ ಸಭೆ ಸಭಾಧ್ಯಕ್ಷ ಯು.ಟಿ.ಖಾದರ್ ಸದನ ಕಲಾಪಗಳನ್ನು ಅನಿರ್ದಿಷ್ಟ ಅವಧಿಗೆ ಮುಂದೂಡಿದರು. 16ನೇ ವಿಧಾನ ಸಭೆಯ 2ನೇ ಅಧಿವೇಶನವು ಡಿ.4 ರಂದು ಬೆಳಗಾವಿ ಸುವರ್ಣ ವಿಧಾನಸೌಧದ ವಿಧಾನ ಸಭೆಯ ಸಭಾಂಗಣದಲ್ಲಿ ಪ್ರಾರಂಭವಾಗಿ ಡಿ.15 ವರೆಗೆ ನಡೆಯಿತು. ಈ ಅಧಿವೇಶನದಲ್ಲಿ ಸುಮಾರು 66 ಗಂಟೆಗಳಿಗೂ ಹೆಚ್ಚು ಕಾರ್ಯಕಲಾಪ ನಡೆದಿದೆ. 2023–24ನೇ ಸಾಲಿನ ಪೂರಕ ಅಂದಾಜು, 2023–24ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯವಾರ್ಷಿಕ ಪರಿಶೀಲನಾ ವರದಿ, ಧನವಿನಿಯೋಗ ವಿಧೇಯಕವು ಸೇರಿದಂತೆ ಒಟ್ಟು 17 ವಿಧೇಯಕಗಳನ್ನು ಮಂಡಿಸಿ ಅಂಗೀಕರಿಸಲಾಗಿದೆ. ರಾಜ್ಯದ 04 ವಿಮಾನ ನಿಲ್ದಾಣಗಳಿಗೆ ಐತಿಹಾಸಿಕ ವ್ಯಕ್ತಿಗಳ ನಾಮಕರಣ ಮಾಡಬೇಕೆಂದು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುವ ಅಧಿಕೃತ ನಿರ್ಣಯ,ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿಯವರು ಬೆಳಗಾವಿಗೆ ಆಗಮಿಸಿದ ಶತಮಾನೋತ್ಸವದ ಸಂಭ್ರಮದಲ್ಲಿ ಸ್ಮಾರಕ ನಿರ್ಮಾಣ ಮಾಡುವ ಕುರಿತು ಖಾಸಗಿ ಸದಸ್ಯರ ನಿರ್ಣಯವನ್ನು ಸದನವು ಸರ್ವಾನುಮತದಿಂದ ಅಂಗೀಕರಿಸಿದೆ. ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಹಾಗೂ ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2023–24ನೇ ಸಾಲಿನ ಮೊದಲನೇ ಹಾಗೂ ಮಧ್ಯಂತರ ವರದಿ, ಸಾರ್ವಜನಿಕ ಉದ್ಯಮಗಳ ಸಮಿತಿಯ 136ನೇ ವರದಿ, ಕರ್ನಾಟಕ ವಿಧಾನಸಭೆಯ ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ 2023–24 ನೇ ಸಾಲಿನ ಮೊದಲನೇ ವರದಿಯನ್ನು ಸದನದಲ್ಲಿ ಮಂಡಿಸಲಾಗಿದೆ. ಒಟ್ಟು 09 ಅಧಿಸೂಚನೆಗಳು, 03 ಅಧ್ಯಾದೇಶಗಳು ಮತ್ತು 61 ವಾರ್ಷಿಕ ವರದಿಗಳು, 105 ಲೆಕ್ಕ ಪರಿಶೋಧನಾ ವರದಿಗಳು ಹಾಗೂ 01 ಲೆಕ್ಕ ತಪಾಸಣಾ ವರದಿಯನ್ನು ಸದನದಲ್ಲಿ ಮಂಡಿಸಲಾಗಿದೆ. ನಿಯಮ 60 ರಡಿಯಲ್ಲಿ ನೀಡಿದ್ದ 04 ಸೂಚನೆಗಳ ಪೈಕಿ 03 ಸೂಚನೆಗಳನ್ನು ನಿಯಮ 69ಕ್ಕೆ ಪರಿವರ್ತಿಸಲಾಗಿದ್ದು, ಒಟ್ಟು 05 ಸೂಚನೆಗಳನ್ನು ನಿಯಮ 69ರಡಿಯಲ್ಲಿ ಚರ್ಚಿಸಲಾಗಿದೆ. ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ನಾಲ್ಕು ಸದಸ್ಯರುಗಳನ್ನು ನಾಮನಿರ್ದೇಶನ ಮಾಡಲು ಸಭಾಧ್ಯಕ್ಷರಿಗೆ ಸದನವು ಅಧಿಕಾರ ನೀಡಲಾಗಿದೆ. ಒಟ್ಟು 3038 ಪ್ರಶ್ನೆಗಳನ್ನು ಶಾಸಕರಿಂದ ಸ್ವೀಕರಿಸಲಾಗಿದೆ. ಸದನದಲ್ಲಿ ಉತ್ತರಿಸಬೇಕಾಗಿದ್ದ 150 ಪ್ರಶ್ನೆಗಳ ಪೈಕಿ 148 ಪ್ರಶ್ನೆಗಳಿಗೆ ಹಾಗೂ ಲಿಖಿತ ಮೂಲಕ ಉತ್ತರಿಸುವ 2206 ಪ್ರಶ್ನೆಗಳ ಪೈಕಿ 2010 ಪ್ರಶ್ನೆಗಳಿಗೆ ಉತ್ತರಗಳನ್ನು ಒದಗಿಸಲಾಗಿದೆ. ನಿಯಮ 351 ರಡಿಯಲ್ಲಿ 200 ಸೂಚನೆಗಳನ್ನು ಅಂಗೀಕರಿಸಿದ್ದು, 110 ಸೂಚನೆಗಳ ಉತ್ತರಗಳನ್ನು ನೀಡಲಾಗಿದೆ. ಗಮನ ಸೆಳೆಯುವ 174 ಸೂಚನೆಗಳ ಪೈಕಿ 140 ಸೂಚನೆಗಳನ್ನು ಸದನದಲ್ಲಿ ಚರ್ಚಿಸಲಾಗಿದೆ.

ಒಟ್ಟಾರೆಯಾಗಿ 197 ಸೂಚನೆಗಳಿಗೆ ಉತ್ತರವನ್ನು ನೀಡಲಾಗಿದೆ. ಶೂನ್ಯ ವೇಳೆಯಲ್ಲಿ ಒಟ್ಟು 31 ಸೂಚನೆಗಳನ್ನು ಚರ್ಚಿಸಲಾಗಿದೆ. 18 ಅರ್ಜಿಗಳನ್ನು ಒಪ್ಪಿಸಲಾಗಿದೆ ಎಂದು ಸಭಾಧ್ಯಕ್ಷ ಯು.ಟಿ.ಖಾದರ್ ತಿಳಿಸಿದ್ದಾರೆ.

**ಉತ್ತರ ಕರ್ನಾಟಕ ಅಭಿವೃದ್ಧಿ ಕುರಿತಾದ ಚರ್ಚೆ:** ಈ ಬಾರಿಯ ವಿಧಾನ ಸಭಾ ಕಲಾಪದಲ್ಲಿ ಉತ್ತರ ಕರ್ನಾಟಕ ಅಭಿವೃದ್ಧಿ ಕುರಿತಾಗಿ ವಿಶೇಷ ಚರ್ಚೆ ಜರುಗಿದೆ. 42 ಶಾಸಕರು 11 ಗಂಟೆ 04 ನಿಮಿಷಗಳ ಕಾಲ ಉತ್ತರ ಕರ್ನಾಟಕ ಅಭಿವೃದ್ಧಿ ಕುರಿತು ಮಾತನಾಡಿದರು.

ಬರಗಾಲ ನಿರ್ವಹಣೆಗೆ **ಸದನದ ಬದ್ಧತೆ:** ರಾಜ್ಯದಲ್ಲಿ ಆವರಿಸಿರುವ ಬರಗಾಲದ ಕುರಿತು ವಿಧಾನ ಸಭೆಯಲ್ಲಿ ಚರ್ಚೆ ಜರುಗಿತು. ಶಾಸಕರು ಹಾಗೂ ಮಂತ್ರಿಗಳು ಬರಗಾಲದ ಬಗ್ಗೆ ಯುದ್ಧ ಸನ್ನದ್ಧ ರೀತಿಯಲ್ಲಿ ಕೈಗೊಳ್ಳಬೇಕಾದ ಕಾರ್ಯಗಳ ಬಗ್ಗೆ ನೀತಿಗಳನ್ನು ರೂಪಿಸಿದರು. ಯುವ ಶಾಸಕರು ಹವಮಾನ ಬದಲಾವಣೆ ಹಾಗೂ ಅದರ ಗಂಭೀರತೆಯ ಬಗ್ಗೆ ಸದನಲ್ಲಿ ಗಹನ ವಿಚಾರಗಳನ್ನು ಮಂಡಿಸಿದರು.

**ಅಧಿವೇಶನಕ್ಕೆ ಸಾಂಸ್ಕೃತಿಕ ಮೆರಗು:** ಸುವರ್ಣ ಸಂಭ್ರಮದ ಹಿನ್ನಲೆಯಲ್ಲಿ ಆರಂಭವಾದ ಅಧಿವೇಶನಕ್ಕೆ ಈ ಬಾರಿ ಸಾಂಸ್ಕತಿಕ ಮೆರಗು ದೊರಕಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸುವರ್ಣ ಸೌಧದ ಮುಂದೆ ಶಾಸೊಥಯ ಹಾಗೂ ನವ ಸಂಗೀತ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಇದರ ನಡುವೆಯೇ ಸುವರ್ಣ ಸೌಧಕ್ಕೆ ಶಾಶ್ವತ ಬಣ್ಣ ಬಣ್ಣದ ವಿದ್ಯುತ್ ದೀಪಾಲಂಕಾರಕ್ಕೆ ಚಾಲನೆ ನೀಡಲಾಗಿದೆ. ಡಿ.12 ರಂದು ಸುವರ್ಣ ಸೌಧದ ಮುಂದೆ ಕರ್ನಾಟಕ ಎಂದು ನಾಮಕರಣಗೊಂಡ 50 ವರ್ಷ ಸಂದ ಹಿನ್ನಲೆಯಲ್ಲಿ ಸುವರ್ಣ ಸಂಭ್ರಮಾಚರಣೆ ಕಾರ್ಯಕ್ರಮ ಆಯೋಜಿಲಾಗಿತ್ತು. ಈ ಕಾರ್ಯಕ್ರಮದಲ್ಲಿ ಕರ್ನಾಟಕ ವಿಧಾನ ಮಂಡಲದ ಮಾಜಿ ಸಭಾಧ್ಯಕ್ಷ ಹಾಗೂ ಸಭಾಪತಿಗಳನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಮೂಡಬಿದರೆಯ ಆಳ್ವ ಶಿಕ್ಷಣ ಸಂಸ್ಥೆ ವಿದ್ಯಾರ್ಥಿಗಳಿಂದ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಭಾನುವಾರ ಸೇರಿದಂತೆ ರಜಾ ದಿನ, ರಾಷ್ಠೊಥಯ ಹಬ್ಬಗಳಂದು ಸುವರ್ಣ ಸೌಧ ವಿದ್ಯುತ್ ವಿದ್ಯುತ್ ದೀಪಾಲಂಕಾರದಿಂದ ಕಂಗೊಳಿಸಲಿದೆ. ಸುವರ್ಣ ಸೌಧ ಉತ್ತರ ಭಾಗದಲ್ಲಿ ಶಾಸಕರ ಹೆಸರಿನಲ್ಲಿ ಗಿಡಗಳನ್ನು ನೆಡುವ ಮೂಲಕ ಪ್ರಕೃತಿ ಕಾಳಜಿಯನ್ನು ಸಹ ಈ ಬಾರಿ ಅಧಿವೇಶನದಲ್ಲಿ ತೋರಲಾಯಿತು.

**ಸುವರ್ಣ ಸೌಧದಲ್ಲಿ ಚಿಣ್ಣರ ಕಲರವ :** ಈ ಬಾರಿಯ ಅಧಿವೇಶನವನ್ನು ರಾಜ್ಯ ಮೂಲೆ ಮೂಲೆಗಳಿಂದ ಆಗಮಿಸಿದ ಶಾಲಾ ಮಕ್ಕಳು, ಕಾಲೇಜು ವಿದ್ಯಾರ್ಥಿಗಳು ವೀಕ್ಷಿಸಿದರು. ಪ್ರಜಾಪ್ರಭುತ್ವ ಹಾಗೂ ಸಂಸದೀಯ ಅಂಶಗಳ ಕುರಿತು ವಿದ್ಯಾರ್ಥಿಗಳು ತಿಳಿದುಕೊಳ್ಳಲು ಸುವರ್ಣ ಮ್ಕಳಿಗೆ ಅವಕಾಶ ಒದಗಿತು. ಇದರ ನಡುವೆ ಸಾರ್ವಜನಿಕರು ಅತಿ ಹೆಚ್ಚು ಸಂಖ್ಯೆಯಲ್ಲಿ ಕಲಾಪಗಳನ್ನು ವೀಕ್ಷಿಸಿದ ಇತಿಹಾಸ ಸೃಷ್ಟಿಯಾಯಿತು.

